ಸಂಪುಟ: ೦೬/ ಸಂಚಿಕೆ: ೨೫೫ /ಶನಿವಾರ ದಿನಾಂಕ : ೦೭-೧೨-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ಧಾರವಾಡ ಬಾಗಲಕೋಟ ವಿಜಯಪುರ ಗದಗ ಕೊಪ್ಪಳ ಹಾವೇರಿ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 255 / SATURDAY Date : 07-12-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

॥ ಸಪ್ತಮಿಷಿವಾಣಿ ॥

ಬದುಕಿನಲ್ಲಿ ಮನುಷ್ಯರ ಮೇಲೆ ನಂಬಿಕೆ ಇಟ್ಟವರು ಭಯಪಡಬಹುದು, ಆದರೆ ಭಗವಂತನ ಮೇಲೆ ನಂಬಿಕೆ ಇಟ್ಟವರು, ಜೀವನಪರ್ಯಂತ ಭಯಪಡುವ ಅವಶ್ಯಕತೆ ಇಲ್ಲಾ.

ಧಾರ್ಮಿಕ ಮಾರ್ಗದರ್ಶಕ
ಸಂತೋಷ ಆಚಾರ್ಯ ಉಡುಪಿ

ಬೆಳಗಾವಿ ಚಳಿಗಾಲ ಅಧಿವೇಶನ

ಸುಗಮ ಅಧಿವೇಶನಕ್ಕಾಗಿ ಸಕಲ ಸಿದ್ಧತೆ: ಜಿಲ್ಲಾಧಿಕಾರಿ

ಬೆಳಗಾವಿ : ಪ್ರಸಕ್ತ ಸಾಲಿನ ಬೆಳಗಾವಿ ಚಳಿಗಾಲ ಅಧಿವೇಶನಕ್ಕೆ ಸಂಬಂಧಿಸಿದಂತೆ ವಸತಿ, ಸಾರಿಗೆ, ಊಟೋಪಹಾರ ಸೇರಿದಂತೆ ಎಲ್ಲ ಅಗತ್ಯ ಸಿದ್ಧತೆಗಳನ್ನು ಜಿಲ್ಲಾಡಳಿತದ ವತಿಯಿಂದ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ತಿಳಿಸಿದರು.

ಬೆಳಗಾವಿ ಸುವರ್ಣ ವಿಧಾನ ಸೌಧದಲ್ಲಿ ಶುಕ್ರವಾರ (ಡಿ.6) ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು.

ಸುಗಮ ಅಧಿವೇಶನಕ್ಕಾಗಿ ಈಗಾಗಲೇ ಹತ್ತು ಸಮಿತಿಗಳನ್ನು ರಚಿಸಲಾಗಿದೆ. ಶಾಸಕರು, ಸಚಿವರು, ಅಧಿಕಾರಿ, ಸಿಬ್ಬಂದಿಗಳ ವಸತಿಗಾಗಿ ಖಾಸಗಿ ಹೋಟೆಲ್, ಅತಿಥಿಗೃಹ, ಪ್ರವಾಸಿಮಂದಿರಗಳಲ್ಲಿ ಒಟ್ಟಾರೆ 2756 ಕೊಠಡಿಗಳನ್ನು ಕಾಯ್ದಿರಿಸಲಾಗಿದೆ ಎಂದು ತಿಳಿಸಿದರು.

ಕಲಾಪಗಳ ವೀಕ್ಷಣೆಗೆ ಆಗಮಿಸುವ ಸಾರ್ವಜನಿಕರಿಗೆ ಎಂಟು ಕಡೆಗಳಲ್ಲಿ ಪಾವತಿ ಆಧಾರದ ಕ್ಯಾಂಟೀನ್ ವ್ಯವಸ್ಥೆ ಮಾಡಲಾಗಿದ್ದು, ಮಹಿಳಾ ಸ್ವ-ಸಹಾಯ ಸಂಘಗಳು ಸೇರಿದಂತೆ ವಿವಿಧ ಬಗೆಯ

ಸಂಸ್ಥೆಗಳಿಗೆ 38 ಸ್ಟಾಲ್ ಗಳಿಗೂ ಅವಕಾಶ ಮಾಡಿಕೊಡಲಾಗುತ್ತಿದೆ.

ಸುವರ್ಣ ವಿಧಾನಸೌಧದಲ್ಲಿ ಬಿ.ಎಸ್. ಎನ್.ಎಲ್. ಸೇರಿದಂತೆ ಎಲ್ಲ ಖಾಸಗಿ ಸಂಸ್ಥೆಗಳಿಂದ ಅತ್ಯುತ್ತಮ ಅಂತರ್ಜಾಲ ಸಂಪರ್ಕ ಕಲ್ಪಿಸಲಾಗಿದೆ ಎಂದರು.

ಅಧಿವೇಶನ ಕಾರ್ಯಕ್ಕೆ ವಿವಿಧ ಜಿಲ್ಲೆಗಳಿಂದ ವಿವಿಧ ಮಾದರಿ ವಾಹನಗಳನ್ನು ತರಿಸಲಾಗುತ್ತದೆ. ವಾಹನ ಚಾಲಕರಿಗೆ ಡಿ.ಟಿ. ಆಯ್, ಕ್ರೀಡಾ ಹಾಸ್ಟೆಲ್ ಹಾಗೂ ಅಂಬೇಡ್ಕರ್ ಭವನದಲ್ಲಿ ವಾಸ್ತವ್ಯಕ್ಕೆ ವ್ಯವಸ್ಥೆ ಕಲ್ಪಿಸಲಾಗಿದ್ದು, ಇದರ ಜೊತೆಗೆ ಖಾಸಗಿ ವಾಹನಗಳನ್ನು ಕೂಡ ಬಳಸಿಕೊಳ್ಳಲಾಗುವದು ಎಂದರು. ಜನಪ್ರತಿನಿಧಿಗಳ ಭೇಟಿಗೆ ಆಗಮಿಸುವ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಆನ್ ಲೈನ್ ಪಾಸ್ ವ್ಯವಸ್ಥೆ ಮಾಡಲಾಗಿದೆ. ಜನಪ್ರತಿನಿಧಿಗಳ ಸಿಬ್ಬಂದಿಗೆ ಪಾಸ್ ನೀಡಲು ಪೋರ್ಟಲ್ ಸೃಷ್ಟಿಸಲಾಗಿದೆ.

ಗಾಂಧೀ ಭಾರತ: ಛಾಯಾಚಿತ್ರ ಪ್ರದರ್ಶನ: 1924 ರಲ್ಲಿ ಮಹಾತ್ಮಾ ಗಾಂಧೀಜಿ ಅಧ್ಯಕ್ಷತೆಯಲ್ಲಿ ಜರುಗಿದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಅಂಗವಾಗಿ ಸುವರ್ಣ ವಿಧಾನಸೌಧದ ಆವರಣದಲ್ಲಿ ಛಾಯಾಚಿತ್ರ ಪ್ರದರ್ಶನ ಕೂಡ ಆಯೋಜಿಸಲಾಗಿದೆ. ಶಾಲಾ ಮಕ್ಕಳಿಗೆ ಆಡಿಟೋರಿಯಂ ನಲ್ಲಿ ಚರ್ಚಾಕೂಟ, ಭಾಷಣ, ಕಿರುಚಿತ್ರ ಪ್ರದರ್ಶನ ಸೇರಿದಂತೆ ವಿವಿಧ ಬಗೆಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು.

ಅಲ್ಲದೇ ಬೆಳಗಾವಿ ನಗರದ ಮೂವತ್ತು ವೃತ್ತಗಳಲ್ಲಿ ಡಿ.9. ರಿಂದಲೇ ಮೈಸೂರು ದಸರಾ ಮಾದರಿ ದೀಪಾಲಂಕಾರ ಮಾಡಲು ನಿರ್ಧರಿಸಲಾಗಿದೆ ಎಂದು ವಿವರಿಸಿದರು.

ಕಾಂಗ್ರೆಸ್ ಶತಮಾನೋತ್ಸವ ಕ್ರಿಯಾ ಯೋಜನೆಗೆ ಮುಖ್ಯಮಂತ್ರಿಗಳು 24 ಕೋಟಿ ರೂಪಾಯಿ ವೆಚ್ಚದ ಪ್ರಸ್ತಾವನೆಗೆ ಅನುಮೋದನೆ ನೀಡಿದ್ದು ಅಲ್ಪಾವಧಿ ಮತ್ತು ದೀರ್ಘಾವಧಿಯ ವಿವಿಧ ಯೋಜನೆಗಳನ್ನು ಹಂತ ಹಂತವಾಗಿ ಅನುಷ್ಠಾನಗೊಳಿಸಲಾಗುವುದು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದರು. ಸುವರ್ಣ ವಿಧಾನಸೌಧ ಬಳಿ ಸೈನ್ಸ್ ಪಾರ್ಕ್ ಉದ್ಘಾಟನೆಗೆ ಸಿದ್ಧಗೊಳಿಸಲಾಗಿದ್ದು, ಇದರಲ್ಲಿ ಚಟುವಟಿಕೆ ಆಧಾರಿತ ಕಲಿಕೆಗೆ ಅನುಕೂಲವಾಗುವಂತೆ ವಿಜ್ಞಾನ ಪಾರ್ಕ್ ವಿನ್ಯಾಸಗೊಳಿಸಲಾಗಿದೆ.

ಪ್ರತಿಭಟನೆಗೆ ಸಿದ್ಧರಾಗಿದ್ದ ವಿವಿಧ ಸಂಘಟನೆಗಳ ಜತೆ ಚರ್ಚಿಸಿ ಅವರ ಸಮಸ್ಯೆಗಳು ಮತ್ತು ಬೇಡಿಕೆಗಳ ಬಗ್ಗೆ ಸರಕಾರದ ಗಮನಕ್ಕೆ ತರಲಾಗಿದೆ. ಕೆಲ ಸಂಘಟನೆಗಳ ಜತೆ ಚರ್ಚಿಸಿ ಪ್ರತಿಭಟನೆ ಕೈಬಿಡುವಂತೆ ಮನವೊಲಿಸಲಾಗಿದೆಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ತಿಳಿಸಿದರು.

ಪೋಲಿಸ್ ಆಯುಕ್ತರಾದ ಯಡಾ ಮಾರ್ಟಿನ್ ಮಾರ್ಬನ್ಯಾಂಗ್ ಅವರು ಮಾತನಾಡಿ, ಅಧಿವೇಶನದ ಭದ್ರತೆಗಾಗಿ 6000 ಕ್ಕೂ ಅಧಿಕ ಪೋಲಿಸ್ ಅಧಿಕಾರಿ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗುತ್ತಿದೆ. ಅಧಿವೇಶನ ಭದ್ರತೆಗಾಗಿ ನಿಯೋಜಿತ ಅಧಿಕಾರಿ ಸಿಬ್ಬಂದಿಗಳಿಗೆ ಸೂಕ್ತ ವಸತಿ ಹಾಗೂ ಊಟದ ವ್ಯವಸ್ಥೆ ಮಾಡಲಾಗುವದು. ಈ ಬಾರಿ ಪ್ರತಿಭಟನೆ ಕುರಿತು 55 ಅರ್ಜಿಗಳನ್ನು ಸ್ವೀಕರಿಸಲಾಗಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಪೊಲಿಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ ಶಿಂಧೆ ಮತ್ತಿತರರು ಉಪಸ್ಥಿತರಿದ್ದರು.

ಭೀಕರ ಅಪಘಾತ ಐವರು ಸಾವು

ವಿಜಯಪುರ: ಕಾರು ಮತ್ತು ತೊಗರಿ ಕಟಾವು ಮಷಿನ್ ಮಧ್ಯೆ ಭೀಕರ ರಸ್ತೆ ಅಪಘಾತ ಸಂಭವಿಸಿ ಕಾರಿನಲ್ಲಿದ್ದ ಐವರು ಮೃತಪಟ್ಟ ಘಟನೆ ಇಂದು ಸಂಜೆ ತಾಳಿಕೋಟೆ ತಾಲೂಕಿನ ಬಿಳೆಬಾವಿ ಕ್ರಾಸ್ ಬಳಿ ನಡೆಯಿತು.

ತಾಳಿಕೋಟೆಯಿಂದ ಹುಣಸಗಿಗೆ ತೆರಳುತ್ತಿದ್ದ ತೊಗರಿ ಕಟಾವು ಮಾಡುವ ಯಂತ್ರ ಹಾಗೂ ಹುಣಸಗಿ ಪಟ್ಟಣದಿಂದ ತಾಳಿಕೋಟೆಯತ್ತ ಆಗಮಿಸುತ್ತಿದ್ದ ಕಾರು ಅಪಘಾತಕ್ಕೀಡಾಗಿದೆ.

ನಿಂಗಪ್ಪಾ ಕರಿಗೌಡ ಪಾಟೀಲ್ (55), ಶಾಂತವ್ವ ಶಂಕರ ಪಾಟೀಲ್ (45), ಭೀಮೇಶಿ ಕಲ್ಲನಗೌಡ ಸಂಕನಾಳ (65), ಶಶಿಕಲಾ ರಾಮಪ್ಪ ಜೈನಪುರ (45) ಹಾಗು ದಿಲೀಪ್ ಕರಿಗೌಡ ಪಾಟೀಲ್ (50) ಮೃತರೆಂದು ಗುರುತಿಸಲಾಗಿದೆ.

ಕನ್ಯೆ ನೋಡಿ ವಾಪಸ್ ಬರುತ್ತಿದ್ದರು: ಯಾದಗಿರಿ ಜಿಲ್ಲೆಯ ಅಗ್ನಿ ಗ್ರಾಮದಲ್ಲಿ ಕನ್ಯೆ ನೋಡಿ ವಾಪಸ್‌ಬರುತ್ತಿದ್ದಾಗ ಕ್ರೂಸರ್ ವಾಹನವನ್ನು ಹಿಂದಿಕ್ಕುವ ಭರದಲ್ಲಿ ಕಟಾವು ಮಷಿನ್‌ಗೆ ಕಾರು ಮುಖಾಮುಖಿ ಡಿಕ್ಕಿಯಾಗಿದೆ ಎಂದು ತಿಳಿದು ಬಂದಿದೆ.

ತಾಳಿಕೋಟೆ ಪೊಲೀಸರು ಸ್ಥಳಕ್ಕಾಗಮಿಸಿ ಜೆಸಿಬಿ ಮೂಲಕ ಕಾರಿನಲ್ಲಿದ್ದ ಶವಗಳನ್ನು ಹೊರತೆಗೆದರು. ಐವರ ಶವಗಳನ್ನು ಮರಣೋತ್ತರ ಪರೀಕ್ಷೆಗೆ ಬಸನಬಾಗೇವಾಡಿ ಸಮುದಾಯ ಆಸ್ಪತ್ರೆಗೆ ರವಾನಿಸಲಾಗಿದೆ. ತಾಳಿಕೋಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪ್ರತ್ಯಕ್ಷದರ್ಶಿ ಮೊಹಮ್ಮದ್ ಗೌಸ್ ಎಂಬವರು ಮಾತನಾಡಿ, "ನಾನು ನನ್ನ ಸ್ನೇಹಿತ 4 ಗಂಟೆಗೆ ಹುಣಸಗಿಗೆ ಹೋಗುತ್ತಿದ್ದೆವು. ಮಷಿನ್ ಹಿಂದೆ ನಾವಿದ್ದೆವು. ನಮ್ಮನ್ನು ಓವರ್‌ಟೇಕ್ ಮಾಡಿ ಕಾರು ಮುಂದೆ ಹೋಯಿತು.

ನಂತರ ಮಷಿನ್‌ಗೆ ಮುಖಾಮುಖಿ ಡಿಕ್ಕಿಯಾಯಿತು. ನಾವು ಅಲ್ಲಿಗೆ ಹೋಗುವಾಗ ಎಲ್ಲರೂ ಮೃತಪಟ್ಟಿದ್ದರು. ಪಿಎಸ್‌ಐಗೆ ಮಾಹಿತಿ ನೀಡಿದ್ವಿ. ಐದು ನಿಮಿಷದಲ್ಲಿ ಅವರು ಬಂದು ಪರಿಶೀಲನೆ ನಡೆಸಿದರು" ಎಂದರು.

ಪಿಎಚ್‌ಡಿ ಪದವಿ ಪ್ರದಾನ

ಮುಧೋಳ: ಬೆಳಗಾವಿಯ ರಾಣಿ ಚೆನ್ನಮ್ಮ ವಿವಿ. 12 ನೇ ಘಟಿಕೋತ್ಸವದಲ್ಲಿ ಮುಧೋಳ ನಗರದ ನಿವಾಸಿ ಡಾ.ವಿಜಯಲಕ್ಷ್ಮೀ ಶಂಕರ ತೋರಗಲ್ ಅವರಿಗೆ ಪಿಎಚ್‌ಡಿ ಪದವಿ ನೀಡಿ ಗೌರವಿಸಲಾಯಿತು.

ಉನ್ನತ್ತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ, ಡಾ.ಇಡ್ಯಾ ಕರುಣಾಸಾಗರ, ಕುಲಪತಿ ಪ್ರೊ.ಸಿ.ಎಂ. ತ್ಯಾಗರಾಜ, ಕುಲಸಚಿವ ಸಂತೋಷ ಕಾಮಗೌಡ ಇತರರು ಇದ್ದರು.

2ಎ ಮೀಸಲಾತಿ ಹೋರಾಟ ನಡೆಯುತ್ತಿದ್ದು

ಚಳಿಗಾಲದ ಅಧಿವೇಶನದಲ್ಲಿ ಚರ್ಚಿಸುತ್ತೇನೆ -ಶಾಸಕ ಬಾಬಾಸಾಹೇಬ ಪಾಟೀಲ

ಬೈಲಹೊಂಗಲ : ಲಿಂಗಾಯತ ಪಂಚಮಸಾಲಿ ಸಮಾಜದ ಬಡಮಕ್ಕಳ ಶೈಕ್ಷಣಿಕ ಹಾಗೂ ಆರ್ಥಿಕ ಶ್ರೇಯೋಭಿವೃದ್ಧಿಗಾಗಿ ಹಲವು ವರ್ಷಗಳಿಂದ 2ಎ ಮೀಸಲಾತಿ ಹೋರಾಟ ನಿರಂತರವಾಗಿ ನಡೆಯುತ್ತಿದ್ದು, ಡಿ.9 ರಂದು ಬೆಳಗಾವಿಯಲ್ಲಿ ನಡೆಯುವ ಚಳಿಗಾಲದ ಅಧಿವೇಶನದಲ್ಲಿ ಚರ್ಚಿಸುತ್ತೇನೆ ಎಂದು ಚನ್ನಮ್ಮನ ಕಿತ್ತೂರು ಶಾಸಕ ಬಾಬಾಸಾಹೇಬ ಪಾಟೀಲ ಹೇಳಿದರು.

ಸಮೀಪದ ನೇಗಿನಹಾಳ ಗ್ರಾಮದ ಶಾಸಕರ ನಿವಾಸದಲ್ಲಿ ಕೂಡಲಸಂಗಮ ಲಿಂಗಾಯತ ಪಂಚಮಸಾಲಿ ಸಮಾಜದ ಪ್ರಥಮ ಜಗದ್ಗುರು ಬಸವಜಯ ಮೃತ್ಯುಂಜಯ ಸ್ವಾಮಿಗಳು ನೇತೃತ್ವದಲ್ಲಿ ಪಂಚಮಸಾಲಿ ಸಮಾಜದ ಮೀಸಲಾತಿಗಾಗಿ ಹೋರಾಟದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಈ ಸಮಾಜ ಸಂಪೂರ್ಣ ಕೃಷಿಯನ್ನೆ ಅವಲಂಬಿತ್ತರಾಗಿದ್ದು, ಕೃಷಿ ಕೂಲಿಕಾರ್ಮಿಕರಾಗಿ ಬದುಕು ನಿರ್ವಹಿಸುವಲ್ಲಿ ಬಹಳಷ್ಟು ಹಿಂದುಳಿದಿದ್ದು ಹಲವಾರು ವರ್ಷಗಳಿಂದ ಅನ್ಯಾಯಕ್ಕೊಳಗಾಗಿದೆ. ಶ್ರೀಗಳ ನೇತೃತ್ವದಲ್ಲಿ ಈ ಹೋರಾಟ ತಾರ್ಕಿಕ ಅಂತ್ಯವಾಗಿ, ಸಮಾಜಕ್ಕೆ ಅನುಕೂಲವಾಗುವ ಸಂಭವ ಇದೆ ಎಂದರು.

ಲಿಂಗಾಯತ ಪಂಚಮಸಾಲಿ ಸಮಾಜದ ರಾಜ್ಯ ಮಹಿಳಾ ಘಟಕದ ಕಾರ್ಯದರ್ಶಿ ರೋಹಿಣಿ ಪಾಟೀಲ ಮಾತನಾಡಿ, ಶ್ರೀಗಳು ಸಮಾಜದ ಏಳ್ಗೆಗಾಗಿ ಹಗಲಿರುಳು ಹೋರಾಟ ಮಾಡುತ್ತಿದ್ದಾರೆ. ಅವರೊಂದಿಗೆ ಕೈಜೋಡಿಸಿ ನಾವೆಲ್ಲರೂ ಗಟ್ಟಿಯಾಗಿ ನಿಂತು ನಮ್ಮ ಕ್ಷೇತ್ರದಿಂದ ಸಾವಿರಾರು ಸಂಖ್ಯೆಯಲ್ಲಿ ಸಮಾಜ ಭಾಂದವರು ಭಾಗವಹಿಸೋಣ ಎಂದರು.

ಈ ಸಂದರ್ಭದಲ್ಲಿ ಪಿಕೆಪಿಎಸ್ ಅಧ್ಯಕ್ಷ ನಾನಾಸಾಹೇಬ ಪಾಟೀಲ, ಮುಖಂಡರಾದ ಶಿವಾನಂದ ದಿವಾಣದ, ಶ್ರೀಶೈಲ

> ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಜಗದೀಶ ಶೆಟ್ಟರ, ಬಸವರಾಜ ಬೊಮ್ಮಾಯಿ ಅವರ ಅಧಿಕಾರವಧಿಯಲ್ಲಿ ಸಮಾಜದ ಮೀಸಲಾತಿಗಾಗಿ ಅನೇಕ ಹೋರಾಟ, ಧರಣಿ ಸತ್ಯಾಗ್ರಹ, ಬೃಹತ್ ಸಮಾವೇಶಗಳನ್ನು ಹಮ್ಮಿಕೊಂಡು ಸರಕಾರದ ಗಮನ ಸೆಳೆದರು ಯಾವುದೇ ಪ್ರಯೋಜನವಾಗಿಲ್ಲ. ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಕೇವಲ ಭರವಸೆ ನೀಡುತ್ತಿದ್ದಾರೆ ವಿನಹ ಕಾರ್ಯ ರೂಪಕ್ಕೆ ತರಲು ಮೀನಾಮೇಷ ಎಸಗಿ, ಮೊಸಳೆ ಕಣ್ಣೀರು ಸುರಿಸುತ್ತಿದ್ದಾರೆ. ಈ ಕಾರಣಕ್ಕಾಗಿ ಡಿ.10 ರಂದು ಸಹಸ್ರಾರು ಪಂಚಮಸಾಲಿಗಳಿಂದ ಬೆಳಗಾವಿಯ ಸುವರ್ಣ ಸೌಧಕ್ಕೆ ಟ್ರ್ಯಾಕ್ಟರ್ ಮೂಲಕ ಮುತ್ತಿಗೆ ಹಾಕಲಾಗುತ್ತಿದ್ದು, ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು. ಈ ಹೋರಾಟಕ್ಕೆ ಅಡೆತಡೆ ಉಂಟು ಮಾಡಿದರೆ ಮುಂದಾಗುವ ಅನಾಹುತಕ್ಕೆ ಸರಕಾರವೇ ನೇರ ಕಾರಣ ಎಂದು ಎಚ್ಚರಿಕೆ ನೀಡಿದರು.
>
> **-ಬಸವಜಯ ಮೃತ್ಯುಂಜಯ ಸ್ವಾಮಿಗಳು**
> ಲಿಂಗಾಯತ ಪಂಚಮಸಾಲಿ ಪ್ರಥಮ ಜಗದ್ಗುರು ಕೂಡಲಸಂಗಮ.

ಹಡಗಿನಹಾಳ, ರುದ್ರಪ್ಪ ಬೋಳೆತ್ತಿನ, ಮಡಿವಾಳಪ್ಪ ಮರಿತಮ್ಮನವರ, ಪ್ರಕಾಶ ತಿಗಡಿ, ಶಿವಪ್ಪ ಕುಂಕೂರ, ಸಂತೋಷ ಕಾಜಗಾರ, ಈರಣ್ಣಾ ಉಳವಿ, ಮಹಾಂತೇಶ ಮರಿತಮ್ಮನವರ ಹಾಗೂ ಚನ್ನಮ್ಮ ಘಟಕದ ಸದಸ್ಯರು ಗ್ರಾಮದ ಪಂಚಮಸಾಲಿ ಸಮಾಜವರು ಉಪಸ್ಥಿತರಿದ್ದರು.

ಚಳಿಗಾಲ ಅಧಿವೇಶನದ ಪೂರ್ವಬಾವಿ ಸಭೆ

ಸಮಯ ನಿರ್ವಹಣೆಗೆ ಹೆಚ್ಚಿನ ಆದ್ಯತೆ ನೀಡಿ: ರಾಹುಲ್ ಶಿಂಧೆ

ಬೆಳಗಾವಿ: ಕಳೆದ ವರ್ಷದಂತೆ ಈ ವರ್ಷವೂ ಸಹ ಚಳಿಗಾಲದ ಅಧಿವೇಶನ ಜಿಲ್ಲೆಯಲ್ಲಿ ಜರುಗುತ್ತಿದ್ದು, ಅಧಿವೇಶನದ ಸುಗಮ ನಿರ್ವಹಣೆಗಾಗಿ ಜಿಲ್ಲಾ ಪಂಚಾಯತಿ ಹಾಗೂ ಅಧೀನ ಇಲಾಖೆಯ ಸಿಬ್ಬಂದಿ ವರ್ಗದವರು ಸಮನ್ವಯತೆ ಸಾಧಿಸುವ ಮೂಲಕ ತಮ್ಮ ಕಾರ್ಯ ನಿರ್ವಹಿಸಿ ಹಾಗೂ ಶಿಸ್ತು ಮತ್ತು ಸಮಯ ನಿರ್ವಹಣೆಗೆ ಹೆಚ್ಚಿನ ಆದ್ಯತೆ ನೀಡಿ ಎಂದು ಜಿಲ್ಲಾ ಪಂಚಾಯತಿ ಸಿಇಒ ರಾಹುಲ್ ಶಿಂಧೆ ರವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ಜರುಗಿದ ಚಳಿಗಾಲದ ಅಧಿವೇಶನದ ಪೂರ್ವಬಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಚಳಿಗಾಲದ ಅಧಿವೇಶನದ ಅಂಗವಾಗಿ ಸುವರ್ಣಸೌಧದಲ್ಲಿ ಹಂಚಿಕೆ ಮಾಡಿರುವ ಕೊಠಡಿಯಲ್ಲಿ ಕಾರ್ಯನಿರ್ವಹಿಸಲು ನಿಯೋಜಿಸಿದ ಅಧಿಕಾರಿ ಹಾಗೂ ಸಿಬ್ಬಂದಿಗಳು ಶಿಸ್ತು ಮತ್ತು ಸಮಯ ಪಾಲನೆ ಕಡ್ಡಾಯವಾಗಿ ಮಾಡಬೇಕು. ಲೈಸನ ಆಫೀಸರ ಆಗಿ ನಿಯೋಜನೆಗೊಂಡ ಅಧಿಕಾರಿಗಳು ರಾಜ್ಯ ಕಛೇರಿಯ ಅಧಿಕಾರಿಯ ವೈಯಕ್ತಿಕ ಸಹಾಯಕರೊಂದಿಗೆ(Personal Assistant) ಸಂಪರ್ಕ ಸಾಧಿಸಿ, ಅವರುಗಳು ಬರುವ ದಿನವನ್ನು ಖಚಿತಪಡಿಸಿಕೊಂಡು ಯಾವುದೇ ಲೋಪ ಆಗದಂತೆ ಅವರುಗಳಿಗೆ ಸೂಕ್ತ ವಸತಿ ಸೌಲಭ್ಯ ಕಲ್ಪಿಸುವುದು. ಅದೇ ರೀತಿ ಲೈಸನ್ ಅಧಿಕಾರಿಗಳು ತಮ್ಮ ಬಳಿ ಲ್ಯಾಪ್‌ಟಾಪ್ ಹಾಗೂ ಇಂಟರ್‌ನೆಟ್ ಸೌಲಭ್ಯ ಇಟ್ಟುಕೊಳ್ಳುವುದು ಕೆಲಸದ ಪ್ರಯುಕ್ತ ಮೇಲಾಧಿಕಾರಿಗಳ ಕೇಳಿದಲ್ಲಿ ಅವರುಗಳಿಗೆ ಹಸ್ತಾಂತರಿಸಬೇಕು ಎಂದರು.

ಐಂಕಿ(Legislative Assembly Questions)ಗೆ ಸಂಬಂಧಿಸಿದಂತೆ ಮಾತನಾಡಿ, ಉಪಕಾರ್ಯದರ್ಶಿ(ಆಡಳಿತ) ರವರು ಬೆಳಿಗ್ಗೆ 8 ರಿಂದ ರಾತ್ರಿ 10 ಗಂಟೆಯವರಿಗೆ ಕಾರ್ಯಾಲಯದಲ್ಲಿ ಇರುವುದು ಯಾವುದೇ ಕಾರಣಕ್ಕೂ ಪ್ರಧಾನ ಕಛೇರಿಯನ್ನು ಅನುಮತಿಯಿಲ್ಲದೆ ಬಿಡುವುವಂತಿಲ್ಲ ಏಕೆಂದರೆ ಅಧಿವೇಶನದ ಪ್ರಯುಕ್ತ ಹಿರಿಯ ಅಧಿಕಾರಿಗಳು ಕಾರ್ಯಾಲಯಕ್ಕೆ ಬರುತ್ತಾರೆ. ಕೆಲವೊಂದು ಸಭೆಗಳನ್ನು ಜರುಗಿಸಲಾಗುವುದು ಎಂದು ಮಾನ್ಯರು ತಿಳಿಸಿದರು.

ಅದೇ ತರಹ ಅಧಿವೇಶನದ ಕೆಲಸಕ್ಕಾಗಿ ನಿಯೋಜನೆಗೊಂಡ ಎಲ್ಲ ಜಿಲ್ಲಾ ಪಂಚಾಯತಿ ಸಿಬ್ಬಂದಿಗಳು ಸಮಯಕ್ಕೆ ಸರಿಯಾಗಿ ತಮಗೆ ಹಂಚಿಕೆ ಮಾಡಿದ ಕೊಠಡಿಯಲ್ಲಿರುವುದು ಹಾಗೂ ಎಲ್ಲರು ಶಿಸ್ತಿನಿಂದ ಒಂದು ತಂಡವಾಗಿ ಕಾರ್ಯನಿರ್ವಹಿಸಬೇಕೆಂದು. ಶನಿವಾರ ಮತ್ತು ರವಿವಾರದಂದು ಯಾವುದೇ ಸಿಬ್ಬಂದಿ ವರ್ಗದವರು ತಮ್ಮ ಮೊಬೈಲ್ ಸ್ವೀಚ್ ಆಫ್ ಮಾಡಕೂಡದು ಒಂದು ವೇಳೆ ಮಾಡಿದ್ದಲಿ ಅವರ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂಚಾಯತ ರಾಜ್) ಉಮಾ ಮಹಾದೇವನ್ ರವರು ಜಿಲ್ಲೆಯಲ್ಲಿ ಕ್ಷೇತ್ರ ಭೇಟಿ ಯಾವುದೇ ಸಂದರ್ಭದಲ್ಲಿ ಮಾಡಬಹುದು ಆದಕಾರಣ ಪಂಚಾಯತ ರಾಜ್ ಕಾಮಗಾರಿಗಳಾದ ಕೂಸಿನ ಮನೆ, ಡಿಜಿಟಲ್ ಲೈಬ್ರರಿ, ರಸ್ತೆ ನಿರ್ಮಾಣ, ಓವರ ಹೆಡ್ ಟ್ಯಾಂಕ್, ಶಾಲೆ ಮತ್ತು ಅಂಗನವಾಡಿ, ಸ್ವ-ಸಹಾಯ ಗುಂಪುಗಳು ಮತ್ತು ಮೇಕೆ ಸಾಕಾಣಿಕೆ ಇವುಗಳ ಮೇಲೆ ನಿಗಾವಹಿಸಿ ಹಾಗೂ ಸಂಬಂಧಿಸಿದ ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಜತೆ ಸಂಪರ್ಕದಲ್ಲಿರಲು ಮಾನ್ಯರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಉದ್ಘಾಟನೆಗೆ ಸಿದ್ಧವಾದ ಅಕ್ಕಾ ಕೆಫೆ, ನ

ಸಂವಿಧಾನ ರಕ್ಷಣೆಗಾಗಿ ದಲಿತ, ಹಿಂದುಳಿದ, ಅಲ್ಪಸಂಖ್ಯಾತರ ಜಾಗೃತಿ ಸಮಾವೇಶ

ಗೋಕಾಕ : ಸಂವಿಧಾನ ರಕ್ಷಣೆಗೆ ಎಲ್ಲರೂ ಮುಂದಾಗಬೇಕು ಎಂದು ಮೂಡಲಗಿಯ ಸರಕಾರಿ ಪದವಿಪೂರ್ವ ಮಹಾವಿದ್ಯಾಲಯದ ಉಪನ್ಯಾಸಕ ಚೇತನರಾಜ ಹೇಳಿದರು

ಬುಧವಾರದಂದು ನಗರದ ನಗರಸಭೆ ಸಮುದಾಯ ಭವನದಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಬೆಳಗಾವಿಯವರು ಹಮ್ಮಿಕೊಂಡ ಸಂವಿಧಾನ ರಕ್ಷಣೆಗಾಗಿ ದಲಿತ, ಹಿಂದುಳಿದ, ಅಲ್ಪಸಂಖ್ಯಾತರ " ಜಾಗೃತಿ ಸಮಾವೇಶ"ದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಂವಿಧಾನದಿಂದ ನಮ್ಮ ರಕ್ಷಣೆಯಾಗುತ್ತಿದೆ. ಸಂವಿಧಾನ ಪೀಠಿಕೆಯನ್ನು ಓದುವ ಮೂಲಕ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಪ್ರತಿಯೊಬ್ಬ-ರಿಗೂ ಸಾಮಾಜಿಕ ನ್ಯಾಯ, ರಾಜಕೀಯ ನ್ಯಾಯ, ಸಮಾನತೆ, ಶಿಕ್ಷಣ, ಸಂಪತ್ತನ್ನು ಅನುಭವಿಸುವ ಹಕ್ಕುಗಳು ದೊರೆಯುತ್ತಿವೆ. ಡಾ.ಬಿ.ಆರ್.ಅಂಬೇಡ್ಕರ್ ಅವರ ಕಾರ್ಯಗಳನ್ನು ಎಲ್ಲರೂ ನೆನೆಯಬೇಕಾಗಿದೆ. ದೇಶದ ಎಲ್ಲ ವರ್ಗದವರಿಗೆ ಮೀಸಲಾತಿ ಕಲ್ಪಿಸಲಾಗಿದೆ. ಸಂವಿಧಾನ ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಕರ್ತವ್ಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಸಂಚಾಲಕ ರಮೇಶ ಸಣ್ಣಕ್ಕಿ ವಹಿಸಿದ್ದರು. ಕಾರ್ಯಕ್ರಮವನ್ನು ನಗರಸಭೆ ಮಾಜಿ ಅಧ್ಯಕ್ಷ ಜಯಾನಂದ ಹುಣ್ಣಿಚ್ಯಾಳಿ ಉದ್ಘಾಟಿಸಿದರು.

ಇದೇ ಸಂದರ್ಭದಲ್ಲಿ ಅಲ್ಪಸಂಖ್ಯಾತ ಕಲಾವಿದರನ್ನು ಸತ್ಕರಿಸಿ, ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಲಕ್ಷ್ಮಣ ಕೆಳಗಡೆ,- ಜಯಶ್ರೀ ಮಾದರ, ಶ್ರೀಕಾಂತ್ ತಳವಾರ, ಶಿವಾನಂದ ಹೊಸಮನಿ,ವಿಲ್ಸನ್ ಖಾನಟ್ಟಿ,ಸಂತೋಷ ಚಂದನವಾಲೆ, ಸಂಜಯ ತಳವಾರಕರ, ಚಿಕ್ಕೋಡಿ ವಿಭಾಗೀಯ ಸಂಚಾಲಕ ಚೇತನ ಗಣಾಚಾರಿ, ತೌಸೀಪ ದೇಸಾಯಿ, ರಮೇಶ ಈರಗಾರ, ಶಾಬಪ್ಪ ಸಣ್ಣಕಿ, ನಟರಾಜ್ ಮಾವರಕರ, ಮಲ್ಲಪ್ಪ ಅಮ್ಮನಗಿ, ವೀರಭದ್ರ ಮೈಲನ್ನವರ, ಸುರೇಶ ಸಣ್ಣಕ್ಕಿ, ರುಕ್ಕಮ್ಮ ಕುದರಿ, ಮೀರಸಾಬ ಹಿರೆಕೋಡಿ, ಸರತಾಜ್ ಮಿರ್ಜಾನಾಯಿಕ, ಮಹಮ್ಮದಶರೀಫ ಮುಧೋಳ, , ಆರೀಫ ಅರಳಿಮಟ್ಟಿ, ಶಾನೂರ ಶಿರಹಟ್ಟಿ, ಭೀಮಶಿ ಹರಿಜನ, ಸೌರಭ ಕಾಂಬಳೆ ಉಪಸ್ಥಿತರಿದ್ದರು.

ಕಾರ್ಮಿಕ ಇಲಾಖೆ ಇಂದು ನೊಂದಾಯಿತ ಕಟ್ಟಡ ಕಾರ್ಮಿಕರಿಗೆ ವಿವಿಧ ಸೌಲಭ್ಯಗಳ ಚೆಕ್ ವಿತರಣೆ ಕಾರ್ಯಕ್ರಮ

ಧಾರವಾಡ : ಜಿಲ್ಲಾಡಳಿತ, ಕಾರ್ಮಿಕ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಇವರ ಸಂಯುಕ್ತ ಆಶ್ರಯದಲ್ಲಿ ಧಾರವಾಡ ಜಿಲ್ಲೆಯ ನೊಂದಾಯಿತ ಕಟ್ಟಡ ಕಾರ್ಮಿಕರಿಗೆ ಟೂಲ್ಸ್ ಕಿಟ್ ವಿತರಣೆ ಹಾಗೂ ಧನಸಹಾಯದ ಮಂಜೂರಾತಿ ಆದೇಶ ಚೆಕ್ ವಿತರಣೆ, ಅಸಂಘಟಿ-ತ ಕಾರ್ಮಿಕರಿಗೆ ಅಪಘಾತ ಪರಿಹಾರ ಧನಸಹಾಯದ ಚೆಕ್ ಮತ್ತು ನೊಂದಣಿ ಪ್ರಮಾಣ ಪತ್ರಗಳ ವಿತರಣೆ ಹಾಗೂ ವಿವಿಧ ಕಾರ್ಮಿಕ ಕಾಯ್ದೆಗಳಡಿ ಕಾರ್ಮಿಕರಿಗೆ ಮಂಜೂರಾದ ಆದೇಶದ ಚೆಕ್ ವಿತರಣೆ ಕಾರ್ಯಕ್ರಮವನ್ನು ಡಿಸೆಂಬರ 7 ರಂದು ಬೆಳಿಗ್ಗೆ 11 ಗಂಟೆಗೆ ಹುಬ್ಬಳ್ಳಿ ಗೋಕುಲ ರೋಡ ಗೋಕುಲ ಗಾರ್ಡನ್‌ದಲ್ಲಿ ಆಯೋಜಿಸಲಾಗಿದೆ.

ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ಕಾರ್ಮಿಕ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ, ಶಾಸಕರು ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಅಧ್ಯಕ್ಷ ವಿನಯ ಕುಲಕರ್ಣಿ, ಶಾಸಕ ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಬ್ಬಯ್ಯ ಪ್ರಸಾದ, ಶಾಸಕ ಹಾಗೂ ವಾಯವ್ಯ ಸಾರಿಗೆ ನಿಗಮದ ಅಧ್ಯಕ್ಷ ಭರಮಗೌಡ ಅಲಗೌಡ ಕಾಗೆ, ಶಾಸಕರು ಹಾಗೂ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜೆ.ಎನ್.ಗಣೇಶ ಅವರು ವಿಶೇಷ ಅತಿಥಿಗಳಾಗಿ ಭಾಗವಹಿಸುವರು.

ಶಾಸಕರಾದ ಮಹೇಶ ಟೆಂಗಿನಕಾಯಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಅರವಿಂದ.ಚಂದ್ರಕಾಂತ.ಬೆಲ್ಲದ, ಎನ್.ಎಚ್ ಕೋನರಡ್ಡಿ, ಎಸ್.ವ್ಹಿ.ಸಂಕನೂರ, ಪ್ರದೀಪ ಶೆಟ್ಟರ, ಎಂ.ಆರ್.ಪಾಟೀಲ್, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಅಪ್ಪಾಸಿ ಬಬಲೇಶ್ವರ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರರಾದ ರಾಮಪ್ಪ ಕೃಷ್ಣಪ್ಪ ಬಡಿಗೇರ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕಿರ್ ಸನದಿ ಅವರು ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಕಾರ್ಮಿಕ ಇಲಾಖೆಯ ಕಾರ್ಯದರ್ಶಿ ಎನ್.ವಿ.ಪ್ರಸಾದ, ಬೆಂಗಳೂರು ಕ.ಕ ಮತ್ತು ಇ.ನಿ.ಕಾ.ಕ ಮಂಡಳಿಯ ಕಾರ್ಯದರ್ಶಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಭಾರತಿ. ಡಿ., ಕಾರ್ಮಿಕ ಇಲಾಖೆಯ ಕಾರ್ಮಿಕ ಆಯುಕ್ತ ಎಚ್. ಎನ್.ಗೋಪಾಲಕೃಷ್ಣ, ಜಿಲ್ಲಾಧಿಕಾರಿ ದಿವ್ಯ ಪ್ರಭು, ಹುಬ್ಬಳ್ಳಿ ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಎಂ.ಬ್ಯಾಕೋಡ್, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ಈಶ್ವರ ಉಳ್ಳಾಗಡ್ಡಿ, ಬೆಂಗಳೂರು ಕ.ರಾ.ಅ.ಕಾ.ಸಾ.ಭ ಮಂಡಳಿಯ ಜಂಟಿ ಕಾರ್ಯದರ್ಶಿ ಹಾಗೂ ಜಂಟಿ ನಿರ್ದೇಶಕ ಎಂ.ಎಸ್. ಚಿದಾನಂದ ಅವರು ಭಾಗವಹಿಸುವರೆಂದು ಕಾರ್ಮಿಕ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

ಕಡಲೆ ಹಾಗೂ ಜೋಳದಲ್ಲಿ ಕೀಟ - ರೋಗಗಳ ಬಾಧೆಯ ತಡೆಗಟ್ಟಲು ನಿರ್ವಹಣೆ ಕ್ರಮಗಳು

ಧಾರವಾಡ : ಧಾರವಾಡ ಜಿಲ್ಲೆಯಾದ್ಯಂತ ಹಿಂಗಾರು ಹಂಗಾಮಿನಲ್ಲಿ 1,81,595 ಹೆಕ್ಟರ್ ಪ್ರದೇಶದಲ್ಲಿ ಬಿತ್ತನೆಯಾಗಿದ್ದು ಮುಖ್ಯ ಹಿಂಗಾರು ಬೆಳೆಗಾಳಾದ ಕಡಲೆ ಹಾಗೂ ಜೋಳದಲ್ಲಿ ಅಲ್ಲಲ್ಲಿ ಕೀಟ ಹಾಗೂ ರೋಗಗಳ ಬಾಧೆ ಕಂಡು ಬರುತ್ತಿದ್ದು ರೈತರು ನಿರ್ವಹಣೆ ಕ್ರಮಗಳನ್ನು ಅನುಸರಿಸಬೇಕು.

ಕಡಲೆಯಲ್ಲಿ ಕಾಯಿ ಕೊರಕ (ಹೆಲಿಕೋವರ್ಪಾ) ನಿರ್ವಹಣೆ: ಬೆಳೆಯು ಕಾಳು ಕಟ್ಟುವ ಹಂತದಲ್ಲಿದ್ದಾಗ ಪ್ರತಿ ಎಕರೆಗೆ 10 ಸೇರು ಚುರಿಮುರಿಯನ್ನು (ಮಂಡಕ್ಕಿ,ಮಂಡ್ಯಾಳ) ಹೊಲದ ತುಂಬೆಲ್ಲಾ ಚೆಲ್ಲಬೇಕು, ಇದ್ದರಿಂದ ಪಕ್ಷಿಗಳು ಆರ್ಕಷಿತಗೊಂಡು ಕೀಡೆಗಳನ್ನು ತಿನ್ನಲು ಪೋತ್ಸಾಹಿಸಿದಂತೆ ಆಗುತ್ತದೆ.

2 ಮಿ.ಲೀ. ಕ್ಲೋರಫೆನಾಪೈರ್ ಶೇ. 24 ಎಸ್.ಸಿ. ಅಥವಾ 0.075 ಮಿ.ಲೀ ಫ್ಲೂಬೆಂಡಿಯಾಮೈಡ್ 39.35 ಎಸ್.ಸಿ ಅಥವಾ ಕ್ಲೋರೆಂಟ್ರಿನಾಲಿಪ್ರೋಲ 18.5 ಎಸ್.ಸಿ., 0.15 ಮಿ. ಲೀ. ಅಥವಾ 0.2 ಗ್ರಾಂ ಇಮಾಮೆಕ್ಟಿನ್ ಬೆಂಜೊಯೇಟ 5 ಎಸ್.ಜಿ. ಅಥ-'ವಾ 0.1 ಮಿ.ಲೀ. ಸ್ಪೈನೊಸ್ಯಾಡ್ 45 ಎಸ್.ಸಿ. ಪ್ರತಿ ಲೀಟರ ನೀರಿಗೆ ಬೆರಸಿ ಸಿಂಪರಣೆ ಮಾಡಬೇಕು.

ಜೋಳದಲ್ಲಿ ಫಾಲ್ ಸೈನಿಕಹುಳು ನಿರ್ವಹಣೆ: ಕೀಡೆಯ ನಿಯಂತ್ರಣಕ್ಕೆ ನೊಮೊರಿಯಾ ರಿಲೈಯೆ, ಮೆಟಾರೆಜಿಯಂ ಅನಿಸೋಪ್ಲೇ ಹಾಗೂ ಬ್ಯಾಸಿಲೆಸ್ ಥುರಿಂಜಿಯಸ್ಸಿಸ್ ನಂತಹ ಜೀವಾಣುಗಳನ್ನು ಬಳಸಿ ಯಶಸ್ವಿ ಹತೋಟಿಯನ್ನು ಮಾಡಬಹುದು.

ಬಿತ್ತನೆಗೆ ಮೊದಲು ಪ್ರತಿ ಕಿ.ಗ್ರಾಂ. ಬೀಜಕ್ಕೆ 5 ಮೀ. ಲೀ ಸೈಯಾಂಟ್ರಾನಿಲಿಪ್ರೋಲ್ ಶೇ. 19.8 + ಥೈಯೋಮಿಥಾಕ್ಸಾಮ್ 19.8 ಡಬ್ಲೂ.ಡಬ್ಲೂ.ಎಫ್. ಎಸ್ ಸಂಯುಕ್ತ ಕೀಟನಾಶಕದಿಂದ ಬೀಜೋಪಚಾರ ಮಾಡಿ ಬಿತ್ತನೆ ಮಾಡಬೇಕು. ತದನಂತರ ಬೆಳೆ 30 ದಿನಗಳಿದ್ದಾಗ ಕ್ಲೋರ್ಯಾಂಟ್ರನಿಲಿಪ್ರೋಲ್ @ 0.30 ಮೀಲೀ ಅಥವಾ ಸ್ಪೈನೊಟೆರ್ಯಾಮ್ 11.7%ಎಸ್.ಸಿ @ 0.50 ಮೀಲೀ ಕೀಟನಾಶಕವನ್ನು ಪ್ರತಿ ಲೀಟರ ನೀರಿಗೆ ಬೆರೆಸಿ ಬೆಳೆಯ ಸುಳಿಯ ಮೇಲೆ ಬೀಳುವಂತೆ ಸಿಂಪಡಿಸಬೇಕು. ಪುನಃ ಅವಶ್ಯವಿದ್ದಲ್ಲಿ 15 ದಿನಗಳ ಅಂತರದಲ್ಲಿ ಕೀಟನಾಶಕಗಳ ಮರುಸಿಂಪರಣೆ ಮಾಡಬೇಕು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರಕ್ಕೆ ಸಂಪರ್ಕಿಸಲು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

****

ಗೃಹರಕ್ಷಕರ ವೃತ್ತಿಪರ ಕ್ರೀಡಾ-ಕೂಟ

ಗೋಕಾಕ: 2024 ನೇ ಸಾಲಿನ ಬೆಳಗಾವಿ ಜಿಲ್ಲಾ ಮಟ್ಟದ ಗೃಹರಕ್ಷಕರ ವೃತ್ತಿಪರ ಮತ್ತು ಕ್ರೀಡಾ-ಕೂಟವನ್ನು ದಿನಾಂಕ 05/12/2024 ರಂದು ಜಿಲ್ಲಾ ಸಮಾದೇಷ್ಟರಾದ ಚನ್ನಪ್ಪ ಎಸ್. ಅಥಣಿ ರವರು ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಬೋಧಕರಾದ ರವೀಂದ್ರ ಮಾಳಗಿ, ಆನಂದ ನಾವಲಗಿ, ಘಟಕಾಧಿಕಾರಿಗಳಾದ ಶ್ರೀ ರಾಜಶೇಖರ ಪರುಶೆಟ್ಟಿ, ಅನಿಲ ಶಿಂಗೆಣ್ಣವರ, ಜಿ.ಜಿ. ದೇಶಪಾಂಡೆ, ರಾಜಶೇಖರ ಕಾನಟ್ಟಿ, ಮಾರುತಿ ನಡುಗೇರಿ, ರಾಜು ಹಾರೊಗೇರಿ, ಮಹಾಂತೇಶ ಬಸರಖೋಡ, ಕಚೇರಿ ಸಿಬ್ಬಂದಿಗಳು ಮತ್ತು ಜಿಲ್ಲೆಯ ಗೃಹರಕ್ಷಕರು, ಗೃಹರಕ್ಷಕಿಯರು ಹಾಜರಿದ್ದರು.

*****

ಮಣ್ಣು ಆರೋಗ್ಯ ದಿನಾಚರಣೆ

ಹಾವೇರಿ: ಹಾವೇರಿ ಕೃಷಿ ಇಲಾಖೆ ವತಿಯಿಂದ ಮಣ್ಣು ಆರೋಗ್ಯ ದಿನಾಚರಣೆ ಅಂಗವಾಗಿ ಆತ್ಮ ಯೋಜನೆಯಡಿ ತರಬೇತಿ ಕಾರ್ಯಕ್ರಮ ಗುರುವಾರ ಹಾವೇರಿ ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಸಭಾಂಗಣದಲ್ಲಿ ಜರುಗಿತು.

ಕಾರ್ಯಕ್ರಮ ಉದ್ಘಾಟಿಸಿದ ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಸಹಾಯಕ ಕೃಷಿ ನಿರ್ದೇಶಕರಾದ ಶ್ರೀಮತಿ ಮೈತ್ರಿ ವಿ ಅವರು ಮಾತನಾಡಿ, ಮಣ್ಣಿನ ಸವಕಳಿ, ಲಘುಪೋಷಕಾಂಶಗಳ ನಿರ್ವಹಣೆ, ಬದು ನಿರ್ಮಾಣ, ಮಣ್ಣು ಪರೀಕ್ಷೆ ವಿಷಯಗಳ ಕುರಿತು ವಿವರಿಸಿದರು.

ಕೃಷಿ ಅಧಿಕಾರಿ ಬಸನಗೌಡ ಪಾಟೀಲ ಮಾತನಾಡಿ, ಮಣ್ಣು ಪರೀಕ್ಷೆ ಮಾಡಿಸಿ ಹಾಗೂ ಸೂಚಿಸಿರುವ ಪ್ರಕಾರ ಗೊಬ್ಬರಗಳ ಬಳಕೆ ಮಾಡಿ ಎಂದು ಸಲಹೆ ನೀಡಿದರು.

ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ ಶರತ್ ಮೈದೂರ ಅವರು ಪಿ.ಪಿ.ಟಿ ಮುಖಾಂತರವಾಗಿ ಮಣ್ಣು ಮಾದರಿ ತೆಗೆಯುವ ವಿಧಾನ ಮತ್ತು ಮಹತ್ವ ಕುರಿತು ತಿಳಿಸಿದರು.

ಕೃಷಿ ಅಧಿಕಾರಿ ಬಸನಗೌಡ ಪಾಟೀಲ ಸ್ವಾಗತಿಸಿದರು. ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕ ಚಂದ್ರಶೇಖರ.ಎಸ್.ಕೆ ಕಾರ್ಯಕ್ರಮ ನಿರೂಪಸಿದರು. ಕೃಷಿ ಅಧಿಕಾರಿ ನಾಗರಾಜ ವಂದಿಸಿದರು. ಹಾವೇರಿ ತಾಲೂಕಿನ ಪ್ರಗತಿಪರ ರೈತರು ಮತ್ತು ರೈತ ಮಹಿಳೆಯರು ಪಾಲ್ಗೊಂಡಿದ್ದರು.

*****

ಸಿರಿಧಾನ್ಯ ನಡಿಗೆ ಆರೋಗ್ಯದ ಕಡೆಗೆ; ಸರಿಧಾನ್ಯ ಜಾಗೃತಿ ಜಾಥಾ

ಜಿಲ್ಲೆಯ ಸಿರಿಧಾನ್ಯ ಬೆಳೆಯುವ, ಸಂರಕ್ಷಿಸುವ ರೈತರಿಗೆ ಕೃಷಿ ಇಲಾಖೆಯಿಂದ ನಿರಂತರ ಪ್ರೋತ್ಸಾಹ

ಧಾರವಾಡ : ಧಾರವಾಡ ಜಿಲ್ಲೆಯಲ್ಲಿ 2023-24 ನೇ ಸಾಲಿನಲ್ಲಿ 2,200 ಜನ ರೈತರು ಸಿರಿಧಾನ್ಯವನ್ನು ಬೆಳೆದು 2 ಕೋಟಿಗೂ ಹೆಚ್ಚು ಪ್ರೋತ್ಸಾಹಧನವನ್ನು ಪಡೆದಿದ್ದಾರೆ. ಇದರಲ್ಲಿ 180 ರಷ್ಟು ರೈತರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿದ್ದಾರೆ. ಸಿರಿಧಾನ್ಯ ಬೆಳೆಯುವುದರಲ್ಲಿ ಕಲಘಟಗಿ ತಾಲೂಕು ಮುಂಚೂಣಿಯಲ್ಲಿದ್ದು 1500 ಕ್ಕೂ ಹೆಚ್ಚು ಜನರು ಈ ಬೆಳೆಗಳನ್ನು ಬೆಳೆದಿದ್ದಾರೆ. ಉಳಿದ ತಾಲೂಕಿನ ರೈತರು ಕೂಡ ಸಿರಿಧಾನ್ಯ ಕೃಷಿಯ ಕಡೆಗೆ ಲಕ್ಷ್ಯ ವಹಿಸಬೇಕಾಗಿದೆ. ಅದರ ಹಿಂದಿನ ಸಾಲಿಗೆ ಹೋಲಿಸಿದರೆ ಪ್ರಸ್ತುತ ವರ್ಷದಲ್ಲಿ ಸಿರಿಧಾನ್ಯ ಬೆಳೆಗಳ ವ್ಯಾಪ್ತಿ ಹೆಚ್ಚಾಗಿದ್ದು, ಇನ್ನೂ ಹೆಚ್ಚಿನ ಪ್ರಗತಿ ಸಾಧಿಸಲು ಇಲಾಖೆಯಿಂದ ಅಗತ್ಯ ಕ್ರಿಯಾಯೋಜನೆ ರೂಪಿಸಲಾಗುತ್ತಿದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ ಅವರು ತಿಳಿಸಿದರು.

ಅವರು ಇಂದು ಬೆಳಿಗ್ಗೆ ಕೃಷಿ ಇಲಾಖೆಯಿಂದ ನಗರದ ಕಡಪಾ ಮೈದಾನದಿಂದ ಕರ್ನಾಟಕ ಕಾಲೇಜು ವೃತ್ತದವರೆಗೆ ಆಯೋಜಿಸಿದ್ದ ಸಿರಿಧಾನ್ಯ ನಡಿಗೆ ಆರೋಗ್ಯದ ಕಡೆಗೆ ಜಾಥಾಗೆ ಚಾಲನೆ ನೀಡಿ, ಮಾತನಾಡಿದರು.

ಸಿರಿಧಾನ್ಯಗಳು ಭಾರತೀಯ ಜೀವನ ಪದ್ದತಿಯ ಪವಾಡ ಧಾನ್ಯಗಳು ಎಂದು ಹೇಳಬಹುದಾಗಿದೆ. ಜೋಳ, ರಾಗಿ, ಸಜ್ಜೆ, ನವಣೆ, ಸಾವಿ, ಬರಗು, ಊದಲು, ಕೊರಲೆ, ಹಾರಕ ಇವು ನಮ್ಮ ಸಂಪ್ರದಾಯಿಕ ಬೆಳೆಗಳಾಗಿದ್ದು, ನಮ್ಮ ಆಹಾರ ಸಂಸ್ಕೃತಿಯ ಅವಿಭಾಜ್ಯ ಅಂಗಗಳಾಗಿವೆ. ಕಾಲಕ್ರಮೇಣ ಆಧುನಿಕ ಮತ್ತು ಆಮದು ಕೃಷಿಯ ಪ್ರಭಾವದಿಂದ ಅವುಗಳ ಸಾಗುವಳಿಯಲ್ಲಿ ಹಿನ್ನಡೆಯಾಗಿತ್ತು. ಆದರೆ ಇತ್ತೀಚಿನ ಕೆಲವು ದಶಕಗಳಿಂದ ಜನಸಾಮಾನ್ಯರಲ್ಲಿ ಸಿರಿಧಾನ್ಯಗಳ ಮಹತ್ವ ಕುರಿತು ಸಾಕಷ್ಟು ಅರಿವು ಮೂಡಿದೆ. ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸಿರಿಧಾನ್ಯಗಳ ಬಳಕೆ ಹೆಚ್ಚಾಗುತ್ತಿದ್ದು, ಗ್ರಾಹಕರು ಅವುಗಳನ್ನು ಕೊಳ್ಳಲು ಮುಂದೆ ಬರುತ್ತಿದ್ದಾರೆ. ಆದ-ರಿಂದ ಈ ಬೆಳೆಗಳನ್ನು ಹೆಚ್ಚು ಹೆಚ್ಚು ಬೆಳೆಯುವುದರೊಂದಿಗೆ ಅವುಗಳ ಸಂಸ್ಕರಣೆ ಮಾರುಕಟ್ಟೆ ವಿಷಯಗಳಲ್ಲೂ ರೈತರನ್ನು ಪ್ರೋತ್ಸಾಹಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

ಕರ್ನಾಟಕ ರಾಜ್ಯ ಸರಕಾರವು ಕೃಷಿ ಇಲಾಖೆಯ ಮುಖಾಂತರ ಸಿರಿಧಾನ್ಯ ಬೆಳೆಗಾರರಿಗೆ ಪ್ರೋತ್ಸಾಹ ನೀಡುವ ದೃಷ್ಟಿಯಿಂದ ರೈತಸಿರಿ ಯೋಜನೆಯನ್ನು ಜಾರಿಗೊಳಿಸಿದೆ. ಇದರಡಿಯಲ್ಲಿ ಸಿರಿಧಾನ್ಯ ಬೆಳೆಯುವ ರೈತರಿಗೆ, ಇಲಾಖಾ ಮಾರ್ಗಸೂಚಿ ಪ್ರಕಾರ ಹೆಕ್ಟೇ-ರಿಗೆ 10,000 ರೂಪಾಯಿ ಪ್ರೋತ್ಸಾಹಧನ ನೀಡಲಾಗುತ್ತಿದೆ. ಸಿರಿಧಾನ್ಯವನ್ನು ವರ್ಷ ಪೂರ್ತಿ ಬೆಳೆಯಬಹುದಾಗಿದ್ದು, ಕಡಿಮೆ ಫಲವತ್ತಾದ ಜಮೀನಿಗೂ ಸೂಕ್ತವಾಗಿದೆ. ಒಣಬೇಸಾಯದಲ್ಲಿ ಹೆಚ್ಚು ವೆಚ್ಚವಿಲ್ಲದೇ ಇವುಗಳನ್ನು ಬೆಳೆಯ ಬಹುದಾಗಿದೆ ಎಂದು ಅವರು ಹೇಳಿದರು.

ರೈತರು ಬೆಳೆಯುವ ಸಿರಿಧಾನ್ಯಗಳ ಸಂಸ್ಕರಣೆಗೂ ಸರಕಾರವು ಪ್ರೋತ್ಸಾಹ ನೀಡುತ್ತದೆ. ರೈತ ಉತ್ಪಾದಕ ಗುಂಪುಗಳ ಮೂಲಕ ರೈತರ ಸಿರಿಧಾನ್ಯ ಉತ್ಪನ್ನಗಳನ್ನು ಖರೀದಿಸುತ್ತಿದೆ. ರೈತರು ಸಿರಿಧಾನ್ಯಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಬೆಳೆದು ತಾವು ಬಳಸಿ, ಗ್ರಾಹಕರಿಗೂ ಒದಗಿಸಿ ಸಮಾಜದ ಆರೋಗ್ಯ ಸ್ವಾಸ್ಥವನ್ನು ಸುಧಾರಿಸುವಲ್ಲಿ ನೆರವಾಗಬೇಕೆಂದು ತಿಳಿಸಿದರು.

ಜಾಥಾದಲ್ಲಿ ಕೃಷಿ ಇಲಾಖೆಯ ಉಪನಿರ್ದೇಶಕರಾದ ಜಯಶ್ರೀ ಹಿರೇಮಠ, ಸಂದೀಪ ಆರ್.ಜಿ., ಸಹಾಯಕ ಕೃಷಿ ನಿರ್ದೇಶಕರಾದ ರಾಜಶೇಖರ ಆನಗೌಡರ, ಚನ್ನಪ್ಪ ಅಂಗಡಿ, ವಿಠ್ಠಲರಾವ್, ಸುಷ್ಮಾ

ಬಾಲ್ಯವಿವಾಹ ಪೊಕ್ಸೋ ಆರ್.ಟಿ.ಇ ಕಾಯ್ದೆ ಕುರಿತು ಅರಿವು ಕಾರ್ಯಕ್ರಮ

ಗದಗ : ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಗದಗ ಇವರ ಸಹಯೋಗದಲ್ಲಿ ಬುಧವಾರ "ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ" "ಬಾಲ್ಯವಿವಾಹ, ಪೊಕ್ಸೋ, ಆರ್.ಟಿ.ಇ ಕಾಯ್ದೆ ಕುರಿತು" ಅರಿವು ಕಾರ್ಯಕ್ರಮವನ್ನು ಎಸ್. ಎಮ್ ಭೂಮರಡ್ಡಿ ಪದವಿ ಪೂರ್ವ ಕಾಲೇಜ ಗಜೇಂದ್ರಗಡದಲ್ಲಿ ಹಮ್ಮಿಕ್ಕೊಳ್ಳಲಾಯಿತು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ರಾಮತ್ನಾಳ ಕಾರ್ಯಕ್ರಮ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ಪ್ರಾಚಾರ್ಯರಾದ ಜಿ.ಬಿ. ಗುಡಿಮನಿ ವಹಿಸಿದರು. ಮಂಜುನಾಥ ಅಸೂಟಿ ಅವರು ಬಾಲ್ಯ ವಿವಾಹ ನಿಷೇಧ , ಪೋಕ್ಸೋ ಕಾಯ್ದೆ ಕುರಿತು ಹಾಗೂ ಶ್ರೀಧರ ಅವರು ಮಾನಸಿಕ ಆರೋಗ್ಯದ ಕುರಿತು ಉಪನ್ಯಾಸ ನೀಡಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಎಸ್. ಬಿ. ಮಸನಾಯಕ್, ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು, ಉಪನ್ಯಾಸಕರು, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳು ಹಾಗೂ ತಾಲೂಕು ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಶ್ರೀಮತಿ ರಫೀಕಾ ಹಳ್ಳೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾಲೇಜಿನ ಉಪನ್ಯಾಸಕರಾದ ಬಿ.ಎಂ.ಜೂಚನಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.ಎ. ಎಸ್.ವಡ್ಡರ್ ಸರ್ವರನ್ನು ಸ್ವಾಗತಿಸಿದರು.

ಕ್ಷಯರೋಗ ಆಂದೋಲನವನ್ನು ಯಶಸ್ವಿಗೊಳಿಸೋಣ

ಗದಗ : ಗೃಹಆರೋಗ್ಯ ಯೋಜನೆಯಲ್ಲಿ ಕ್ಷಯರೋಗವನ್ನು ಪತ್ತೆ ಹಚ್ಚಿ ತ್ವರಿತಗತಿಯಲ್ಲಿ ಚಿಕಿತ್ಸೆ ನೀಡಬೇಕು. ಜಿಲ್ಲೆಯ ಎಲ್ಲಾ ಕಡೆಗಳಲ್ಲಿ ವ್ಯಾಪಕವಾಗಿ ಪ್ರಚಾರವನ್ನು ನಡೆಸಿ ಜನರಲ್ಲಿ ಅರಿವು ಮೂಡಿಸಬೇಕು ಎಂದು ಮಾನ್ಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಎಸ್ ಎಸ್ ನೀಲಗುಂದ ತಿಳಿಸಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ಮಂಗಳವಾರ ಎನ್‌ಟಿಇಪಿ 100 ದಿನಗಳ ಶಿಬಿರದ ಸಭೆಯಲ್ಲಿ ಮಾತನಾಡಿದ ಅವರು ಮಾತನಾಡಿದರು.

ಕ್ಷಯರೋಗವನ್ನು ಪತ್ತೆ ಹಚ್ಚಲು ತರಬೇತಿ ನೀಡಬೇಕು.

ಸುಮಾರು 55 ವರ್ಷ ವಯಸ್ಸಿನವರನ್ನು, ಸಕ್ಕರೆ ಕಾಯಿಲೆ ಇರುವವರನ್ನು, ಏಡ್ಸ್ ಸೋಂಕಿತರನ್ನು, ಧೂಮಪಾನ, ಮದ್ಯಪಾನ ಮಾಡುವವರನ್ನು ಹಾಗೂ ಹೆಚ್ಚು ಜನ ಸಮೂಹ ಸೇರುವ ಸ್ಥಳಗಳಲ್ಲಿ ಕ್ಷಯರೋಗ ಪತ್ತೆ ಹಚ್ಚುವ ಪರೀಕ್ಷೆ ಮಾಡಬೇಕು ಎಂದರು.

ರೋಗಿಗಳ ಗುಣಲಕ್ಷಣಗಳ ಆಧಾರದ ಮೇಲೆ ಆಯುಷ್ಮಾನ್ ಆರೋಗ್ಯ ಕೇಂದ್ರಕ್ಕೆ ಸೇರಿಸಿಕೊಳ್ಳುವುದು ಅಥವಾ ಅವರ ಸ್ವಂತ ಮನೆಯಲ್ಲಿಯೇ ಚಿಕಿತ್ಸೆ ನೀಡಬೇಕು ಎಂಬ ಸೂಕ್ತ ನಿರ್ಧಾರಗಳನ್ನು ತೆಗೆದುಕೊಳ್ಳಬೇಕು. ಕ್ಷಯರೋಗ ಬಂದವರಿಗೆ ಪ್ರಧಾನ ಮಂತ್ರಿ ಟಿಬಿಮುಕ್ತ ಭಾರತದ ಅಭಿಯಾನದ ಮಿಷನ್ ಮೂಲಕ ಪೌಷ್ಠಿಕ ಆಹಾರ ಕೊಡಿಸಲು ಜಿಲ್ಲೆಯ ಖಾಸಗಿ ಕಂಪನಿಗಳ ಮೂಲಕ ಒಂದೊಂದು ತಾಲೂಕುಗಳಲ್ಲಿ ಒಬ್ಬೊಬ್ಬರಿಗೆ ಜವಾಬ್ದಾರಿ ನೀಡಬೇಕು ಹಾಗೂ ನಿಕ್ಷಯ ಪೋಷಣ್ ಯೋಜನೆ ಮತ್ತು ನಿಕ್ಷಯ ಮಿತ್ರವನ್ನು ಎಲ್ಲಾ ಕೇಂದ್ರಗಳಲ್ಲಿ ಜಾರಿಗೆ ತರಬೇಕು ಎಂದು ನಿರ್ದೇಶಿಸಿದರು.

ಡಿಸೆಂಬರ್ 7, 2024ರಂದು ಎನ್‌ಟಿಇಪಿ ಶಿಬಿರಗಳಿಗೆ ಚಾಲನೆ ನೀಡಲಾಗುವುದು. 2025ರ ಮಾರ್ಚ 24ರ ವರೆಗೆ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ಹಬ್ಬ ಹರಿದಿನಗಳ ಸಂದರ್ಭಗಳಲ್ಲಿ ಹಾಗೂ ಯುವಜನ-ರಿಗೆ ಕ್ಷಯರೋಗದ ಬಗ್ಗೆ ಹೆಚ್ಚಿನ ಅರಿವು ಮೂಡಿಸಬೇಕು.

ಕ್ಷಯರೋಗ ಬಂದು ವಾಸಿಯಾದ ವ್ಯಕ್ತಿಗಳನ್ನು ಕರೆತಂದು ಜನರಿಗೆ ಜಾಗೃತಿ ಮೂಡಿಸಬೇಕು. ಕಾರ್ಯಕ್ರಮಗಳಲ್ಲಿ ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮಾನ್ಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಡಾ.ಅರುಂಧತಿ.ಕೆ., ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳು, ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು, ತಾಲೂಕಾ ಆರೋಗ್ಯಾಧಿಕಾರಿಗಳು ಹಾಗೂ ಎನ್‌ಟಿಇಪಿ ಸಿಬ್ಬಂದಿಯವರು ಹಾಜ-ರಿದ್ದರು.

ಚೂರು-ಪಾರು

ಉಚಿತ ಕೌಶಲ್ಯಾಧರಿತ ತರಬೇತಿಗೆ ಅರ್ಜಿ ಆಹ್ವಾನ

ಕಾರವಾರ – ಕೆನರಾ ಬ್ಯಾಂಕ ಗ್ರಾಮೀಣ ಸ್ವಉದ್ಯೋಗ ತರಬೇತಿ ಸಂಸ್ಥೆ, ಕುಮಟಾದ ವತಿಯಿಂದ ಡಿ.9 ರಿಂದ ಜ.7 ರವರೆಗೆ 30 ದಿನಗಳ ಕಾಲ ಮಹಿಳೆಯರಿಗೆ ಬ್ಯೂಟಿ ಪಾರ್ಲರ್ ಹಾಗೂ ವಸ್ತ್ರ ಚಿತ್ರಾಕಲಾ ಉದ್ಯಮಿ ಮತ್ತು ಪ್ಯಾಬ್ರಿಕ್ ಪೆಂಟಿಂಗ್ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಗ್ರಾಮೀಣ ಪ್ರದೇಶದ ಬಿಪಿಎಲ್ ಅಭ್ಯರ್ಥಿಗೆ ಮೊದಲ ಆದ-ಯತೆ ನೀಡಲಾಗುವುದು. ತರಬೇತಿಯಲ್ಲಿ ಊಟ ಮತ್ತು ವಸತಿ ಸಹಿತ ಉಚಿತವಾಗಿರುತ್ತದೆ. ಅಭ್ಯರ್ಥಿಯು ನಿರುದ್ಯೋಗಿಯಾಗಿದ್ದು, ಸ್ವ ಉದ್ಯೋಗದಲ್ಲಿ ಆಸಕ್ತಿ ಹೊಂದಿರಬೇಕು. ವಯೋಮಿತಿ 18 ರಿಂದ 45 ವರ್ಷಗಳು. ಹಾಗೂ ಕನಿಷ್ಟ ವಿದ್ಯಾರ್ಹತೆ ಕನ್ನಡ ಓದಲು ಬರೆಯಲು ಬರಬೇಕು ಮತ್ತು ತರಬೇತಿಗೆ ಅನುಗುಣವಾಗಿ ಕನಿಷ್ಠ ಜ್ಞಾನವಿರಬೇಕು.

ಆಸಕ್ತರು ತರಬೇತಿಗೆ ಬರುವಾಗ 4 ಪಾಸ್‌ಪೋರ್ಟ ಸೈಜ್ ಫೋಟೋ, ರೇಶನ ಕಾರ್ಡ, ಆಧಾರ್ ಕಾರ್ಡ, ಬ್ಯಾಂಕ್ ಪಾಸ್‌ಬುಕ್, ಪಾನ್‌ಕಾರ್ಡ್ ಇವುಗಳ 1ಝೆರಾಕ್ಸ್ ಪ್ರತಿಯನ್ನು ತರಬೇಕು. ಈ ತರಬೇತಿಯ ಸದುಪಯೋಗವನ್ನು ಪಡೆದುಕೊಂಡು ಉದ್ಯೋಗ ಕೈಗೊಳ್ಳಬಹುದಾಗಿದೆ.

ಆಸಕ್ತರು ನಿರ್ದೇಶಕರು, ಕೆನರಾ ಬ್ಯಾಂಕ ಗ್ರಾಮೀಣ ಸ್ವಉ-ದ್ಯೋಗ ತರಬೇತಿ ಸಂಸ್ಥೆ, ಕೈಗಾರಿಕಾ ವಸಾಹತು ಪ್ರದೇಶ, ಹೆಗಡೆರಸ್ತೆ, ಕುಮಟಾ –581343 ಉತ್ತರ ಕನ್ನಡ ಜಿಲ್ಲೆ ಇವರಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಅಲ್ಲದೇ ದೂರವಾಣಿ ಸಂಖ್ಯೆ: 9449860007, 9538281989, 9916783825, 8880444612, 9620962004, ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿದೆ ಎಂದು ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದು ಕೊಪ್ಪಳ ನಗರಸಭೆ ಸಾಮಾನ್ಯ ಸಭೆ

ಕೊಪ್ಪಳ : ಕೊಪ್ಪಳ ನಗರಸಭೆ ಸಾಮಾನ್ಯ ಸಭೆಯನ್ನು ಡಿಸೆಂಬರ್ 07 ರಂದು ಬೆಳಿಗ್ಗೆ 11 ಗಂಟೆಗೆ ನಗರಸಭೆ ಕಾರ್ಯಾಲಯ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್ ಅವರು ಸಭೆಯ ಅಧ್ಯಕ್ಷತೆಯನ್ನು ವಹಿಸುವರು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯಡಿ ಪ್ರಸ್ತಾವನೆಗೆ ಆಹ್ವಾನ

ಕೊಪ್ಪಳ : 2024-25ನೇ ಸಾಲಿಗಾಗಿ ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯ ವಿಶೇಷ ಘಟಕ / ಗಿರಿಜನ ಉಪ ಯೋಜನೆಯಡಿ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತಿ ಸಣ್ಣ ಎಸ್.ಎಮ್.ಇ ಘಟಕ ಸ್ಥಾಪನೆಗೆ ಸಹಾಯಧನಕ್ಕೆ ಅರ್ಹ ಫಲಾನುಭವಿಗಳಿಂದ ಪ್ರಸ್ತಾವನೆಗಳನ್ನು ಆಹ್ವಾನಿಸಲಾಗಿದೆ.

ಕೊಪ್ಪಳ ಜಿಲ್ಲೆಗೆ 03 ವಿಶೇಷ ಘಟಕ ಯೋಜನೆ ಮತ್ತು 01 ಗಿರಿಜನ ಉಪ ಯೋಜನೆಯಡಿ ಗುರಿಯನ್ನು ನಿಗದಿಪಡಿಸಲಾಗಿದ್ದು, ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತಿ ಸಣ್ಣ ಎಸ್.ಎಮ್.ಇ ಘಟಕ ಸ್ಥಾಪಿಸಲು ಇಚ್ಛಿಸಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಫಲಾನುಭವಿಗಳು ಡಿಸೆಂಬರ್ 20 ರೊಳಗಾಗಿ ಉಪ ನಿರ್ದೇಶಕರ ಕಛೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಅಶೋಕ ಸರ್ಕಲ್ ಹತ್ತಿರ ಕೊಪ್ಪಳ ಈ ಕಚೇರಿಗೆ ಪರಿಪೂರ್ಣ ಪ್ರಸ್ತಾವನೆಯನ್ನು ಸಲ್ಲಿಸಬಹುದು.

ಮೊದಲು ಸಲ್ಲಿಸಿದ ಅರ್ಹ ಪ್ರಸ್ತಾವನೆಗಳನ್ನು ಆದ್ಯತೆಯ ಮೇರೆಗೆ ಪರಿಗಣಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಛೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಅಶೋಕ ಸರ್ಕಲ್ ಹತ್ತಿರ ಕೊಪ್ಪಳ, ದೂರವಾಣಿ ಸಂಖ್ಯೆ:08539-295469ಯನ್ನು ಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯುವಮತದಾರರು ಚುನಾವಣೆ ಮಹತ್ವ ತಿಳಿದು ಜಾಗೃತರಾಗಬೇಕು

ಗದಗ : ಯುವ ಮತದಾರರು ಎನ್.ವಿ.ಡಿ ಸ್ಪರ್ಧೆಯಲ್ಲಿ ಭಾಗವಹಿಸಿ ಚುನಾವಣೆ ಮಹತ್ವ ತಿಳಿದು ಜಾಗೃತರಾಗಿ ಮತದಾರರ ಪಟ್ಟಿಯಲ್ಲಿ ನೋಂದಣಿ ಮಾಡಿಕೊಳ್ಳಬೇಕು ಎಂದು

ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿಗಳಾದ ಸಿ. ಆರ್. ಮುಂಡರಗಿ ಅವರು ಹೇಳಿದರು.

ನಗರದ ಸರ್ಕಾರಿ ಪದವಿ-ಪೂರ್ವ ಕಾಲೇಜನಲ್ಲಿ ಗುರುವಾರ ಕರ್ನಾಟಕ ಮುಖ್ಯ ಚುನಾವಣಾಧಿಕಾರಿಗಳು, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ಸ್ವೀಪ್ ಸಮಿತಿ, ಶಾಲಾ ಶಿಕ್ಷಣ ಇಲಾಖೆ (ಪದವಿ-ಪೂರ್ವ) ಸಹಯೋಗದಲ್ಲಿ ಏರ್ಪಡಿಸಿದ ಜಿಲ್ಲಾ ಮಟ್ಟದ ಎನ್.ವಿ.ಡಿ ಸ್ಪರ್ಧೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿರುವ ನೂತನ ಮತ್ತು ಭವಿಷ್ಯದ ಯುವ ಮತದಾರರಲ್ಲಿ ಚುನಾವಣಾ ಮತ್ತು ಮತದಾನ ಪ್ರಕ್ರಿಯೆಗಳಿಗೆ ಸಂಬಂಧಿಸಿದಂತೆ ಜಾಗೃತಿ ಮೂಡಿಸುವ ಸಲುವಾಗಿ ವಿಶ್ವವಿದ್ಯಾಲಯಗಳು ಸೇರಿದಂತೆ ಎಲ್ಲಾ ಶೈಕ್ಷಣಿಕ ಸಂಸ್ಥೆಗಳಲ್ಲಿ "ಮತದಾರರ ಸಾಕ್ಷರತಾ ಸಂಘ" [Electoral Literacy Clubs] ಗಳನ್ನು ಹಾಗೂ ಪ್ರತಿ ವಿಧಾನ ಸಭಾ

ಕ್ಷೇತ್ರದ ಮತಗಟ್ಟೆ ಕೇಂದ್ರಗಳಲ್ಲಿ ಚುನಾವಣಾ ಪಾಠಶಾಲೆ [ಚುನಾವಣಾ ಜಾಗೃತಿ ಸಂಘ] ಗಳನ್ನು ಈಗಾಗಲೇ ಸ್ಥಾಪಿಸಲಾಗಿದೆ, ಈ ಶೈಕ್ಷಣಿಕ ಸಂಸ್ಥೆಗಳಲ್ಲಿ ಯುವ ಮತದಾರರಿಗೆ ಚುನಾವಣೆ ಮಹತ್ವ, ಜಾಗೃತಿ ಮೂಡಿಸುವ ಹಾಗೂ ಮತದಾರರ ಪಟ್ಟಿಯಲ್ಲಿ ನೋಂದಣಿ ಮಾಡಿಕೊಳ್ಳುವ ವಿಷಯಾಧಾರಿತ ಕನ್ನಡ & ಆಂಗ್ಲ ಭಾಷೆಯಲ್ಲಿ ಪ್ರಬಂಧ ರಚಿಸುವುದು, ರಸ ಪ್ರಶ್ನೆ, ಮತ್ತು ಭಿತ್ತಿ ಚಿತ್ರಗಳನ್ನು ಬಿಡಿಸುವುದು ಹಾಗೂ ಕಡಿಮೆ ಮತದಾನವಾಗಿರುವ ನಗರ ಪ್ರದೇಶದ ಚುನಾವಣೆಯಲ್ಲಿ ಭಾಗವಹಿಸುವಿಕೆಯಿಂದ ಆಗುವ ಪ್ರಯೋಜನೆಗಳು ಕುರಿತು ಕಿರು ನಾಟಕ ಸ್ಪರ್ಧೆಗಳನ್ನು ತಾಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಆಯೋಜಿಸಲು ವೇಳಾಪಟ್ಟಿಯನ್ನು ಹೊರಡಿಸಿಲಾಗಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕರು ಸಿದ್ಧಲಿಂದ ಬಂಡು ಮಸನಾಯಕ, ಸರ್ಕಾರಿ ಪದವಿ-ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಶ್ರೀಮತಿ ಪೂರ್ಣಿಮಾ ಹೊಸಮನಿ, ಜಿಲ್ಲಾ ರಾಜ್ಯಶಾಸ್ತ್ರ ಉಪನ್ಯಾಸಕರ ವೇದಿಕೆ ಅಧ್ಯಕ್ಷರಾದ ಎಂ. ಎಸ್. ಮುಲ್ಲಾ, , ಗದಗ, ಗದಗ ಜಿಲ್ಲಾ ಘಟಕ, ಶ್ರೀ. ಕೆ. ಎಂ. ಮಾಕಣ್ಣವರ, ಮತ್ತು ಶ್ರೀ. ಎಸ್. ಐ. ಮೇಟಿ ಹಾಗೂ ಶ್ರೀ ನವೀನ್ ಅಳವಂಡಿ, ಜಿಲ್ಲಾ ಇಐಆ ಜಿಲ್ಲಾ ಸಂಯೋಜ-ಕರು,ವಿದ್ಯಾರ್ಥಿಗಳು ಉಪಸ್ಥಿತಿಯಿದ್ದರು.

ಹಣಕಾಸು ಆಯೋಗದಿಂದ ಜಿಲ್ಲೆಗೆ ಹೆಚ್ಚಿನ ಅನುದಾನ ನೀಡಲು ಶಿಫಾರಸು: ನಾರಾಯಣಸ್ವಾಮಿ

ಕಾರವಾರ :- ಜಿಲ್ಲೆಯಲ್ಲಿ ಅತಿವೃಷ್ಟಿ, ಪ್ರವಾಹ, ನೆರೆ ಹಾವಳಿ, ಭೂ ಕುಸಿತ ಸಂದರ್ಭದಲ್ಲಿ ವಿಪತ್ತು ನಿರ್ವಹಣೆಗಾಗಿ ಹೆಚ್ಚಿನ ಹಣ ವ್ಯಯ ಮಾಡಬೇಕಾಗಿದ್ದು, ಆ ನಿಟ್ಟಿನಲ್ಲಿ ಹಣಕಾಸು ಹಂಚಿಕೆಗೆ ಸಂಬಂಧಿಸಿದಂತೆ ಚರ್ಚಿಸಿ, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಸಲಹೆ ಪಡೆದು ಅವುಗಳನ್ನು ಸರ್ಕಾರಕ್ಕೆ ಶಿಫಾರಸ್ಸು ಮಾಡುವುದಾಗಿ ರಾಜ್ಯದ ಏದನೇ ಹಣಕಾಸು ಆಯೋಗದ ಅಧ್ಯಕ್ಷ ನಾರಾಯಣಸ್ವಾಮಿ ತಿಳಿಸಿದರು.

ಅವರು ಗುರವಾರ ಕಾರವಾರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಗದ ಸದಸ್ಯರಾದ ಮೊಹಮ್ಮದ್ ಸನಾವುಲ್ಲಾ, ಆರ್. ಎಸ್. ಪೋಂಡೆ ಅವರ ನೇತೃತ್ವದಲ್ಲಿ ಗ್ರಾಮೀಣ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಸಾಂಸ್ಥಿಕ ರಚನೆ, ಕಾರ್ಯಚಟುವಟಿಕೆಗಳು, ಆರ್ಥಿಕ ಸ್ಥಿತಿ, ಸಂಪನ್ಮೂಲಗಳ ಕ್ರೋಢೀಕರಣ ಹಂಚಿಕೆ ಮತ್ತು ಮೂಲ ಸೌಕರ್ಯ ಹಾಗೂ ಸೇವೆಗಳ ಒದಗಿಸುವಿಕೆಯಲ್ಲಿ ತಾಂತ್ರಿಕ ಕೌಶಲ್ಯ, ಸಾಮರ್ಥ-ಯ ಇತ್ಯಾದಿಗಳನ್ನು ಅಧ್ಯಯನ ಮಾಡುವ ಸಲುವಾಗಿ ಹಾಗೂ ಜಿಲ್ಲೆಯ ಪಂಚಾಯತ ರಾಜ್ ಸಂಸ್ಥೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದ ವಿಷಯಗಳ ಕುರಿತು ಪರಿಶೀಲನಾ ಸಭೆ ನಡೆಸಿದರು.

ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿರುವ ಪ್ರವಾಸಿ ತಾಣಗಳಿಂದ ಸಂಗ್ರಹವಾಗುವ ಆದ-ಾಯದಲ್ಲಿ ಪಂಚಾಯತಿಗಳಿಗೆ ಯಾವುದೇ ರೀತಿಯ ಪಾಲು ಸಿಗುತ್ತಿಲ್ಲ ಎಂಬ ಪಂಚಾಯತ್ ಅಧ್ಯಕ್ಷರೊಬ್ಬರ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ ಸದಸ್ಯ ಮೊಹಮ್ಮದ್ ಸನಾಉಲ್ಲಾ, ಪ್ರವಾಸಿ ತಾಣಗಳಲ್ಲಿ ಕಸ ಸಂಗ್ರಹಣೆ, ನಿರ್ವಹಣೆ ಎಲ್ಲವೂ ಗ್ರಾಮ ಪಂಚಾಯತ್ ವತಿಯಿಂದ ಮಾಡಲಾಗುತ್ತದೆ. ಆದರೆ ಆದಾಯ ಮಾತ್ರ ಪ್ರವಾಸೋದ್ಯಮ ಇಲಾಖೆ ಅಥವಾ ಅರಣ್ಯ ಇಲಾಖೆಯ ತೆಗೆದುಕೊಳ್ಳುತ್ತದೆ. ಇದು ಯಾವುದೇ ರೀತಿಯಲ್ಲಿ ಸದರಿ ಪಂಚಾಯತ್ ಅಭಿವೃದ್ಧಿಗೆ ಬಳಕೆಯಾಗುವುದಿಲ್ಲ. ಹೀಗಾಗಿ ಆದಾಯದಲ್ಲಿ ಹಂಚಿಕೆ ಆಗಬೇಕು. ಅಥವಾ ಅವರ ಕೆಲಸ-ಕಾರ್ಯಗಳಿಗೆ ಹಣ ನಿಗದಿಪಡಿಸಿ ಸಂದಾಯ ಮಾಡುವಂತ ವ್ಯವಸ್ಥೆ ಆಗಬೇಕು ಎಂದರು. ರಾಜ್ಯ ಸರ್ಕಾರದಿಂದ ವ್ಯವಸ್ಥಿತ ಅನುದಾನ ಹಂಚಿಕೆ, ಸಂಪನ್ಮೂಲಗಳ ಹಂಚಿಕೆ, ಆಡಳಿತಕ್ಕೆ ಸಂಬಂಧಿಸಿದ ಸಲಹೆ ಮತ್ತು ಯೋಜನೆಗಳನ್ನು ಜಾರಿಗೆ ತರುವಲ್ಲಿ ಆಯೋಗದಿಂದ ಶಿಫಾರಸ್ಸು ಮಾಡಲು ಸ್ಥಳೀಯ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಅನಿಸಿಕೆಗಳು ಅವಶ್ಯವಾಗಿದೆ ಎಂದರು.

ಇದೇ ವೇಳೆ 5ನೇ ಹಣಕಾಸು ಆಯೋಗದ 2024-25ನೇ ಸಾಲಿನ ವರದಿ ಪ್ರತಿಯನ್ನು ಆಯೋಗದ ಅಧ್ಯಕ್ಷರು ಜಿಲ್ಲಾಧಿಕಾರಿ ಹಾಗೂ ಸಿಇಓ ಅವರಿಗೆ ಹಸ್ತಾಂತರಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ, ಜಿ.ಪಂ. ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಈಶ್ವರ್ ಕಾಂಡೂ, ಜಿಲ್ಲಾ ವಿಕೇಂದ್ರೀಕರಣ ಸಮಿತಿ ಉಪಾಧ್ಯಕ್ಷ ಪ್ರಮೋದ ಹೆಗಡೆ, ಸಲಹೆಗಾರರಾದ ಕೆಂಪೇಗೌಡ, ಯಾಲಕ್ಕಿ ಗೌಡ, ಸುಪ್ರಸನ್ನ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ನಗರಸಭೆ, ಪಟ್ಟಣ ಪಂಚಾಯತ್, ಗ್ರಾಮ ಪಂಚಾಯತ್ ಜನ ಪ್ರತಿನಿಧಿಗಳು, ತಾಲೂಕು ಮತ್ತು ಪಂಚಾಯತ್ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಪರಿಶಿಷ್ಟ ಜಾತಿ ಯುವಜನರಿಗೆ ಜಾನಪದ ತರಬೇತಿ ಶಿಬಿರಕ್ಕೆ ಅರ್ಜಿ ಆಹ್ವಾನ

ಕೊಪ್ಪಳ : ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂ

ಮಳೆಗಾಲ ಓಕೆ, ಆಗ ಪಿಂಪಲ್ಸ್ ಬರುವುದು ಯಾಕೆ? ಇಲ್ಲಿದೆ ಪರಿಹಾರದ ಸಿಂಪಲ್ ಟಿಪ್ಸ್!

ಮಳೆಗಾಲ ಎಂದರೆ ಇಷ್ಟು ದಿನಗಳ ಕಾಲ ಅನುಭವಿಸಿದ ಬೇಸಿಗೆಯ ಬಿಸಿಯನ್ನು ತಂಪು ಮಾಡಲು ಬರುವ ಕಾಲ ಎಂಬ ಮಾತಿದೆ. ಹಾಗೆಂದು ಮಳೆಗಾಲದಲ್ಲೂ ಬಿಸಿಲು ಕೂಡ ಇರುತ್ತದೆ. ಮಳೆಗಾಲದ ಈ ಸಂದರ್ಭದಲ್ಲಿ ತೇವಾಂಶದ ವಾತಾವರಣದ ಜೊತೆಗೆ ಸ್ವಲ್ಪ ಬಿಸಿ ವಾತಾವರಣ ಕೂಡ ಇರುವುದರಿಂದ ಬ್ಯಾಕ್ಟೀರಿಯಾಗಳ ಬೆಳವಣಿಗೆಗೆ ಒಳ್ಳೆ ಸೂಕ್ತವಾದ ಕಾಲ ಇದಾಗಿದೆ.

ಬ್ಯಾಕ್ಟೀರಿಯಾಗಳು ಗಾಳಿಯಲ್ಲಿ ಹೆಚ್ಚಾಗಿ ಕಂಡುಬರುವುದರಿಂದ ಮತ್ತು ನಾವು ಕೂಡ ಹೊರಗೆ ಒಳಗೆ ಓಡಾಡುವುದರಿಂದ, ಇವುಗಳು ನಮ್ಮ ಚರ್ಮದ ಸಂಪರ್ಕಕ್ಕೆ ಬರುತ್ತವೆ ಮತ್ತು ಈ ಸಂದರ್ಭದಲ್ಲಿ ನಮ್ಮ ತ್ವಚೆಯಲ್ಲಿ ಸಣ್ಣ ಪುಟ್ಟ ಪ್ರಮಾಣದ ಸೋಂಕು ಉಂಟಾಗಿ ಅದು ಪಿಂಪಲ್ಸ್ ಅಥವಾ ಮೊಡವೆಗಳಾಗಿ ಬದಲಾಗುತ್ತದೆ.

ಅಧ್ಯಾಯನದ ಪ್ರಕಾರ...

ಇನ್ನು ಕೆಲವೊಂದು ಮೂಲಗಳ ಪ್ರಕಾರ ಹೇಳುವುದಾದರೆ ನಮ್ಮ

ಚರ್ಮದ ಭಾಗದಲ್ಲಿ, ನಮ್ಮ ಕೂದಲಿನ ಕಿರುಚೀಲಗಳ ಸುತ್ತಲೂ ಇರುವ ಎಣ್ಣೆಯ ಗ್ರಂಥಿಗಳು ಕಟ್ಟಿಕೊಂಡಂತೆ ಆಗುತ್ತವೆ ಮತ್ತು ಸೋಂಕಿಗೆ ಗುರಿಯಾಗುತ್ತದೆ.

ಮಳೆಗಾಲದಲ್ಲಿ ತೇವಾಂಶ ಹೆಚ್ಚಾಗಿರುವುದರಿಂದ ಮತ್ತು ಬಿಸಿಯ ವಾತಾವರಣ ಕೂಡ ಇರುವುದರಿಂದ ಅದು ನಮ್ಮ ಚರ್ಮದ ಭಾಗದಲ್ಲಿ ಎಣ್ಣೆಯ ಅಂಶವನ್ನು ಉತ್ಪತ್ತಿ ಮಾಡುತ್ತದೆ.

ಚರ್ಮದಿಂದ ಹೊರಬರುವ ಅತಿಯಾದ ಎಣ್ಣೆಯ ಅಂಶ ಸತ್ತ ಜೀವಕೋಶಗಳ ಜೊತೆಗೆ ಸೇರಿಕೊಂಡು ಚರ್ಮದಲ್ಲಿನ ರಂಧ್ರಗಳು ಮುಚ್ಚಿಕೊಂಡಂತೆ ಆಗಿ ಊದಿಕೊಳ್ಳುತ್ತವೆ ಮತ್ತು ಇದರಲ್ಲಿ ಕೀವು ತರಹದ ದ್ರವ ತುಂಬಿಕೊಂಡು ಮೊಡವೆಗಳಾಗಿ ಬದಲಾಗುತ್ತವೆ. ಸಾಮಾನ್ಯವಾಗಿ ಮೊಡವೆಗಳು ನಮ್ಮ ಹಣೆ, ಕುತ್ತಿಗೆ, ದವಡೆ, ಕೆನ್ನೆಗಳ ಮೇಲೆ ಕಂಡುಬರುತ್ತವೆ.

ಮೊಡವೆ ಕಲೆಗಳು ಮೂಡುವ ಸಾಧ್ಯತೆ ಇರುತ್ತದೆ!

ಒಂದು ವೇಳೆ ನಿಮ್ಮ ಮುಖದ ಮೇಲೆ ಏನಾದರೂ ಮೊಡವೆ ಕಂಡು ಬಂದರೆ ಅದನ್ನು ಕಿತ್ತುಹಾಕಲು ಟ್ರೈ ಮಾಡಬೇಡಿ. ಏಕೆಂದರೆ ಇದು ಮೊಡವೆ ಮತ್ತಷ್ಟು ಹೆಚ್ಚಾಗುವಂತೆ ಮಾಡುತ್ತದೆ ಮತ್ತು ಮುಖದ ಮೇಲೆ ಕಲೆ ಕೂಡ ಬೀಳುತ್ತದೆ.

ಇದಕ್ಕೆ ವೈದ್ಯಕೀಯವಾಗಿ ಹಲವಾರು ವಿಧಾನಗಳಿವೆ. ಮನೆ ಮದ್ದುಗಳು ಕೂಡ ಇವೆ. ನೈಸರ್ಗಿಕವಾದ ಮನೆ ಮದ್ದುಗಳು ಸುರಕ್ಷಿತ ಮತ್ತು ಇದರಿಂದ ಹಣ ಕೂಡ ಉಳಿತಾಯವಾಗುತ್ತದೆ. ಮೊಡವೆಗಳಿಂದ ಮುಕ್ತಿ ಪಡೆಯಲು ಇಲ್ಲಿ ಸುಲಭವಾದ ಕೆಲವೊಂದು ಮನೆ ಮದ್ದುಗಳಿವೆ. ನೋಡೋಣ ಬನ್ನಿ.

ನಿಂಬೆಹಣ್ಣಿನ ರಸ

ನಿಂಬೆಹಣ್ಣಲ್ಲಿ ಆಂಟಿ ವೈರಲ್ ಮತ್ತು ಆಂಟಿ ಬ್ಯಾಕ್ಟೀರಿಯಲ್ ಗುಣಲಕ್ಷಣಗಳು ಇದ್ದು, ಇದು ಬ್ಯಾಕ್ಟೀರಿಯಾಗಳ ಬೆಳವಣಿಗೆಯನ್ನು ಕುಂಠಿತಗೊಳಿಸುತ್ತದೆ ಮತ್ತು ಸೋಂಕನ್ನು ದೂರಮಾಡುತ್ತದೆ.

ವಿಟಮಿನ್ ಸಿ ಪ್ರಮಾಣ ಹೆಚ್ಚಾಗಿರುವ ನಿಂಬೆಹಣ್ಣು ನಮ್ಮ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ.

ನಿಂಬೆಹಣ್ಣಿನ ರಸ ನಮ್ಮ ತ್ವಚೆಯನ್ನು ಸೂರ್ಯನ ಹಾನಿಕಾರಕ ಕಿರಣಗಳಿಗೆ ಸೆನ್ಸಿಟಿವ್ ಆಗುವಂತೆ ಮಾಡುತ್ತದೆ. ಹೀಗಾಗಿ ಮುಖಕ್ಕೆ ನಿಂಬೆಹಣ್ಣಿನ ರಸ ಅಪ್ಲೈ ಮಾಡಿ ಸೂರ್ಯನ ಬಿಸಿಲಿಗೆ ಹೋಗಬೇಡಿ.

ಆಗ ತಾನೆ ಹಿಂಡಿದ ನಿಂಬೆ ಹಣ್ಣಿನ ರಸವನ್ನು ನೇರವಾಗಿ ಪಿಂಪಲ್ ಮೇಲೆ ಅಪ್ಲೈ ಮಾಡಿ. ಇಡೀ ರಾತ್ರಿ ಇದನ್ನು ಹಾಗೆ ಬಿಟ್ಟು ನಂತರ ಬೆಳಗ್ಗೆ ವಾಶ್ ಮಾಡಿ.

ಇನ್ನೊಂದು ಪರಿಹಾರವೆಂದರೆ ಒಂದು ಟೇಬಲ್ ಚಮಚ ಕಡಲೆಕಾಯಿ ಎಣ್ಣೆ ತೆಗೆದುಕೊಂಡು ಅದಕ್ಕೆ ನಿಂಬೆರಸ ಸೇರಿಸಿ ಅದನ್ನು ನಿಮ್ಮ ಮುಖದ ತುಂಬಾ ಹಚ್ಚಿಕೊಳ್ಳಿ.

ಬೆಳ್ಳುಳ್ಳಿ

ಅಲಿಸಿನ್ ಇರುವಂತಹ ತಾಜಾ ಬೆಳ್ಳುಳ್ಳಿ ತನ್ನಲ್ಲಿ ಆಂಟಿ ಬ್ಯಾಕ್ಟೀರಿಯಲ್, ಆಂಟಿ ಫಂಗಲ್, ಆಂಟಿ ವೈರಲ್ ಮತ್ತು ಆಂಟಿ ಸೆಪ್ಟಿಕ್ ಲಕ್ಷಣಗಳನ್ನು ಪಡೆದಿದೆ.

ಇದು ನಮ್ಮ ತ್ವಚೆಯಲ್ಲಿ ಮೊಡವೆ ಉಂಟುಮಾಡಲು ಕಂಡುಬರುವಂತಹ ಬ್ಯಾಕ್ಟೀರಿಯಗಳನ್ನು ಹೋಗಲಾಡಿಸುತ್ತದೆ. ಊತ ಕಡಿಮೆ ಆಗುವಂತೆ ಮಾಡುತ್ತದೆ ಮತ್ತು ಉರಿಯುತವನ್ನು ಕಡಿಮೆ ಮಾಡಿ ರಕ್ತ ಸಂಚಾರ ಹೆಚ್ಚಾಗುವಂತೆ ಮಾಡುತ್ತದೆ.

ನಿಮಗೆ ಮುಖದ ಯಾವ ಭಾಗದಲ್ಲಿ ಮೊಡವೆಗಳು ಉಂಟಾಗಿರುತ್ತವೆ ಅಲ್ಲಿ ಹಸಿ ಬೆಳ್ಳುಳ್ಳಿ ಜ್ಯೂಸ್ ಅಪ್ಲೈ ಮಾಡಿ. ಆನಂತರ ನೀರಿನಿಂದ ತೊಳೆದುಕೊಳ್ಳಿ. ಒಂದು ವೇಳೆ ಮುಖದ ಮೇಲೆ ಉರಿ ಅಥವಾ ಕೆರೆತ ಕಂಡು ಬಂದರೆ ತಕ್ಷಣವೇ ಮುಖ ತೊಳೆದುಕೊಳ್ಳಿ.

ನಿಮ್ಮ ತ್ವಚೆ ತುಂಬಾ ಸೆನ್ಸಿಟಿವ್

ಇದ್ದರೆ, ಬೆಳ್ಳುಳ್ಳಿ ಜ್ಯೂಸ್ ಗೆ ನೀರು ಹಾಕಿ ಅಥವಾ ರೋಜ್ ವಾಟರ್ ಮಿಕ್ಸ್ ಮಾಡಿ ಡೈಲ್ಯೂಟ್ ಮಾಡಿ. ಬೇಕೆಂದರೆ ಬೆಳ್ಳುಳ್ಳಿ ಪೇಸ್ಟ್ ಮತ್ತು ಮೊಸರು ಸೇರಿಸಿ ಫೇಸ್ ಪ್ಯಾಕ್ ತಯಾರಿಸಿ ಮುಖಕ್ಕೆ ಅನ್ವಯಿಸಬಹುದು.

ಟೊಮ್ಯಾಟೋ ತಿರುಳು

ಟೊಮೆಟೊ ನಿಮಗೆಲ್ಲ ಗೊತ್ತಿರುವ ಹಾಗೆ ಆಮ್ಲಿಯ ಗುಣವನ್ನು ಹೊಂದಿರುತ್ತವೆ. ಚರ್ಮದ ರಂದ್ರಗಳನ್ನು ಮುಚ್ಚುವುದರ ಮೂಲಕ ಟೊಮ್ಯಾಟೋ ತನ್ನ ಆಂಟಿ ಆಕ್ಸಿಡೆಂಟ್ ಪ್ರಭಾವ ವನ್ನು ಉಂಟು ಮಾಡಿ ಉರಿಯುತವನ್ನು ಕಡಿಮೆ ಮಾಡಿ ಚರ್ಮ ಹಾನಿಯಾಗುವುದನ್ನು ತಪ್ಪಿಸುತ್ತದೆ.

ಟೊಮೇಟೊ ಹಣ್ಣಿನ ತಿರುಳನ್ನು ತೆಗೆದುಕೊಂಡು ಅದರಿಂದ ರಸ ಹಿಂಡಿ ಮೊಡವೆಗಳಿಗೆ ಹಚ್ಚಿ. ಬೇಕೆಂದರೆ ಟೊಮೆಟೊ ರಸವನ್ನು ನೀರಿನಿಂದ ಡೈಲ್ಯೂಟ್ ಮಾಡಿ ದಿನಕ್ಕೆ ಒಂದು ಅಥವಾ ಎರಡು ಬಾರಿ ಅನ್ವಯಿಸಿ. ಇದು ಚರ್ಮ ಒಣಗುವುದನ್ನು ತಪ್ಪಿಸುತ್ತದೆ.?

ದಾಲ್ಚಿನ್ನಿ ಮತ್ತು ಜೇನುತುಪ್ಪದ ಪ್ಯಾಕ್

ದಾಲ್ಚಿನ್ನಿ ಅಥವಾ ಚಕ್ಕೆ ತನ್ನಲ್ಲಿ ಬಲವಾದ ಆಂಟಿ ಮೈಕ್ರೋಬಿಯಲ್ ಗುಣಲಕ್ಷಣಗಳನ್ನು ಒಳಗೊಂಡಿರುತ್ತದೆ. ಜೇನುತುಪ್ಪ ಆಂಟಿ ಇನ್ಫ್ಲಮೆಟರಿ ಲಕ್ಷಣಗಳನ್ನು ಹೊಂದಿ ರುತ್ತದೆ.

ಇದು ಚರ್ಮದಲ್ಲಿ ಮೊಡವೆಗಳು ಉಂಟಾಗುವುದನ್ನು ತಪ್ಪಿಸುತ್ತದೆ ಮತ್ತು ಚರ್ಮ ಕೆಂಪು ಬಣ್ಣಕ್ಕೆ ತಿರುಗುವ ಸಾಧ್ಯತೆಯನ್ನು ತಡೆಯುತ್ತದೆ. ಜೇನುತುಪ್ಪ ತ್ವಚೆಗೆ ನೀರಿನ ಅಂಶವನ್ನು ಒದಗಿಸುವುದ–ರಿಂದ ನಮ್ಮ ಚರ್ಮ ಯಾವಾಗಲು ಸಾಫ್ಟ್ ಮತ್ತು ದಷ್ಟಪುಷ್ಟವಾಗಿರುತ್ತದೆ.

ದಾಲ್ಚಿನ್ನಿ ಪುಡಿಯನ್ನು ಜೇನುತುಪ್ಪದ ಜೊತೆ ಮಿಕ್ಸ್ ಮಾಡಿ ಪೇಸ್ಟ್ ತಯಾ–ರಿಸಿಕೊಳ್ಳಿ. ಸಣ್ಣ ಪ್ರಮಾಣದಲ್ಲಿ ಈ ಪೇಸ್ಟ್ ಅನ್ನು ಮುಖದ ಮೇಲಿನ ಮೊಡವೆಗಳ ಮೇಲೆ ಹಚ್ಚಿ ಇಡೀ ರಾತ್ರಿ ಹಾಗೆ ಬಿಡಿ.

ಉಗುರು ಬೆಚ್ಚಗಿನ ನೀರಿನಲ್ಲಿ ಬೆಳಗ್ಗೆ ಎದ್ದು ಮುಖ ತೊಳೆದು ಕೊಳ್ಳಿ. ಕೆಲವು ದಿನಗಳವರೆಗೆ ಹೀಗೆ ಮಾಡಿ ಮುಖದ ಮೇಲಿನ ಮೊಡವೆಗಳನ್ನು ಹೋಗಲಾಡಿಸಿಕೊಳ್ಳಬಹುದು.?

ಮೆಂತ್ಯ ಫೇಸ್ ಪ್ಯಾಕ್

ಮೆಂತ್ಯ ಫೇಸ್ ಪ್ಯಾಕ್ ಸಾಮಾನ್ಯವಾಗಿ ಬ್ಲಾಕ್ ಹೆಡ್ ಮತ್ತು ಮೊಡವೆಗಳನ್ನು ಹೋಗಲಾಡಿಸುತ್ತದೆ. ಮೆಂತ್ಯ ಎಲೆಗಳನ್ನು ಈ ಸಂದರ್ಭದಲ್ಲಿ ಬಳಸುವುದು ಬಹಳ ಒಳ್ಳೆಯದು ಎಂದು ಚರ್ಮ ರೋಗ ತಜ್ಞರು ಅಭಿಪ್ರಾಯ ಪಡುತ್ತಾರೆ.

ಸ್ವಲ್ಪ ನೀರಿನ ಜೊತೆ ಮೆಂತ್ಯ ಎಲೆಗಳನ್ನು ಸೇರಿಸಿ ಜಜ್ಜಿ ಪೇಸ್ಟ್ ತಯಾರಿಸಿ ಕೊಂಡು ರಾತ್ರಿ ಮಲಗುವ ಸಂದರ್ಭದಲ್ಲಿ ಮುಖದ ಮೇಲಿನ ಮೊಡವೆಗಳಿಗೆ ಇದನ್ನು ಹಚ್ಚಿ ಬೆಳಗ್ಗೆ ಉಗುರು ಬೆಚ್ಚಗಿನ ನೀರಿನಲ್ಲಿ ಮುಖ ತೊಳೆದುಕೊಳ್ಳಬೇಕು.?

ಖಾಲಿ ಹೊಟ್ಟೆಯಲ್ಲಿ ಶುಂಠಿ ರಸ ಕುಡಿಯೋದ್ರಿಂದ ಜೀರ್ಣಕ್ರಿಯೆಗೆ ಮಾತ್ರವಲ್ಲ ಇವುಗಳಿಗೂ ಒಳ್ಳೆಯದು

ಶುಂಠಿಯು ತನ್ನನ್ನು ಬಳಸಿದಂತಹ ಖಾದ್ಯಕ್ಕೆ ರುಚಿ ಹಾಗೂ ಸುವಾಸನೆ ನೀಡುವುದು ಮಾತ್ರವಲ್ಲದೆ, ದೇಹಕ್ಕೂ ಇದು ಹಲವಾರು ಲಾಭಗಳನ್ನು ಒದಗಿಸುವುದು. ಹಿಂದಿನಿಂದಲೂ ಶುಂಠಿಯನ್ನ ಔಷಧೀಯ ರೂಪದಲ್ಲಿ ಭಾರತೀಯರು ಬಳಸಿಕೊಂಡು ಬರುತ್ತಿದ್ದಾರೆ. ಅದರಲ್ಲೂ ಮಳೆಗಾಲದಲ್ಲಿ ಇದನ್ನು ಬಳಸಿ ಬರುವಂತಹ ಶೀತ, ಕೆಮ್ಮು ಸಮಸ್ಯೆಗಳನ್ನು ನಿವಾರಣೆ ಮಾಡಬಹುದು.

ಇದೇ ಶುಂಠಿಯನ್ನು ಬಳಸಿಕೊಂಡು ತೂಕ ಕೂಡ ಇಳಿಸಬಹುದು ಎಂದು ಹೆಚ್ಚಿನ ಜನರಿಗೆ ತಿಳಿದಿಲ್ಲ. ಹೌದು, ಶುಂಠಿಯ ನೀರನ್ನು ಬಳಸಿದರೆ ಆಗ ಇದು ಪ್ರತಿರೋಧಕ ಶಕ್ತಿ ವೃದ್ಧಿ ಮಾಡಿ, ಜೀರ್ಣಕ್ರಿಯೆ ಸುಧಾರಿಸುವುದು. ಬೆಳಗ್ಗೆ ಈ ಶಕ್ತಿ ಪೇಯವನ್ನು ಕುಡಿಯುವುದರಿಂದ ಸಿಗುವ ಐದು ಲಾಭಗಳ ಬಗ್ಗೆ ತಿಳಿಯೋಣ.

ಜೀರ್ಣಕ್ರಿಯೆ ಸುಧಾರಿಸಲು ನೆರವಾಗುವುದು

ಶುಂಠಿಯು ಜೀರ್ಣಕ್ರಿಯೆಗೆ ಸಹಕಾರಿ ಎನ್ನುವುದು ತಿಳಿದೇ ಇದೆ. ಖಾಲಿ ಹೊಟ್ಟೆಯಲ್ಲಿ ಶುಂಠಿ ಪಾನೀಯ ಕುಡಿದರೆ ಆಗ ಇದು ದಿನವಿಡಿ ಜೀರ್ಣಕ್ರಿಯೆ ವ್ಯವಸ್ಥೆಯನ್ನು ಪ್ರಬಲವಾಗಿಡುವುದು. ಶುಂಠಿಂ–ಮು ಹೊಟ್ಟೆಯಿಂದ ಸಣ್ಣ ಕರುಳಿಗೆ ಆಹಾರವು ಬೇಗನೆ ಸಾಗುವಂತೆ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸುವುದು ಎಂದು ಅಧ್ಯಯನಗಳು ಹೇಳಿವೆ. ಇದರಿಂದ ಹೊಟ್ಟೆಯ ಅಹಿತಕರ ಮತ್ತು ಹೊಟ್ಟೆ ಉಬ್ಬರ ತಡೆಯಬಹುದು.

ಶುಂಠಿಯಲ್ಲಿ ಜಿಂಜರೋಲ್ ಮತ್ತು ಶೋಗಾಲ್ ಎನ್ನುವ ಅಂಶವಿದ್ದು, ಇದು ಉರಿಯೂತ ಶಮನಕಾರಿಯಾಗಿ ಕೆಲಸ ಮಾಡಿ, ಜೀರ್ಣಕ್ರಿಯೆ ವವಸ್ಥೆಯನ್ನು ಶಮನಗೊಳಿಸಿ, ಅಜೀರ್ಣ ಮತ್ತು ವಾಕರಿಕೆ ಲಕ್ಷಣಗಳನ್ನು ಕಡಿಮೆ ಮಾಡುವುದು. ಶುಂಠಿ ಪಾನೀಯವನ್ನು ಖಾಲಿ ಹೊಟ್ಟೆಯಲ್ಲಿ ಸೇವನೆ ಮಾಡಿದರೆ ಆಗ ಆಹಾರದಲ್ಲಿ ಇರುವಂತಹ ಪೋಷಕಾಂಶಗಳನ್ನು ಹೀರಿಕೊಳ್ಳಲು ಇದು ಸಹಕಾರಿ ಆಗಿದೆ.

?ನೈಸರ್ಗಿಕವಾಗಿ ತೂಕ ಇಳಿಸಲು?

ಯಾರಾದರೂ ತೂಕ ಇಳಿಸಲು ಪ್ರಯತ್ನಿಸುತ್ತಿದ್ದರೆ, ಆಗ ಖಂಡಿತವಾಗಿಯೂ ಶುಂಠಿ ಪಾನೀಯ ಸೇವನೆ ಮಾಡಬೇಕು. ಇದು ದೇಹದಲ್ಲಿ ಉಷ್ಣತೆಯನ್ನು ಉಂಟು ಮಾಡಿ, ಕ್ಯಾಲರಿ ದಹಿಸಲು ಸಹಕಾರಿ ಆಫಿರುವುದು. ಶುಂಠಿ ನೀರನ್ನು ಖಾಲಿ ಹೊಟ್ಟೆಯಲ್ಲಿ ಕುಡಿದರೆ ಅದರಿಂದ ಚಯಾಪಚಯ ವೃದ್ಧಿ ಆಗುವುದು ಮತ್ತು ತೂಕ ಇಳಿಸಲು ಇದು ತುಂಬಾ ಸಹಕಾರಿ ಆಗಿರುವುದು ಎಂದು ಅಧ್ಯಯನಗಳು ಹೇಳಿವೆ.

ಶುಂಠಿಯು ಬಯಕೆ ಕಡಿಮೆ ಮಾಡಲು ನೆರವಾಗುವುದು ಮತ್ತು ಇದರಿಂದ ಅತಿಯಾಗಿ ತಿನ್ನುವುದನ್ನು ಕಡಿಮೆ ಮಾಡಬಹುದು. ಶುಂಠಿ ಪಾನೀಯ ಸೇವನೆಯಿಂದಾಗಿ ಹೊಟ್ಟೆಯು ತುಂಬಿದಂಎ ಆಗುವುದು ಮತ್ತು ಇದರಿಂದ ಆರೋಗ್ಯಕಾರಿ ಆಹಾರ ಕ್ರಮ ಪಾಲಿಸಲು ಇದು ಸಹಕಾರಿ ಆಗಿದೆ. ಚಯಾಪಚಯ ವೃದ್ಧಿ ಮತ್ತು ಬಯಕೆ ಕಡಿಮೆ ಮಾಡುವ ಎರಡು ಗುಣಗಳಿಂದಾಗಿ ಇದು ತೂಕ ಇಳಿಸಲು ತುಂಬಾ ಸಹಕಾರಿ ಆಗಿದೆ.

ಪ್ರತಿರೋಧಕ ವ್ಯವಸ್ಥೆಗೆ ಧನಾತ್ಮಕ ಪರಿಣಾಮ

ಶುಂಠಿ ಪಾನೀಯವು ಪ್ರತಿರೋಧಕ ವ್ಯವಸ್ಥೆಗೆ ಧನಾತ್ಮಕ ಕ್ತಿ ನೀಡುವುದು. ಇದರಲ್ಲಿ ಆ?ಯಂಟಿಆ–ಕ್ಸಿಡೆಂಟ್ ಸಮೃದ್ಧವಾಗಿದ್ದು, ಇದು ದೇಹದಲ್ಲಿನ ಫ್ರೀ ರ್ಯಾಡಿಕಲ್ ನ್ನು ತಟಸ್ಥಗೊಳಿಸುವುದು. ಈ ಆ?ಯಂಟಿಆಕ್ಸಿಡೆಂಟ್ ಗಳು ದೇಹದಲ್ಲಿ ಪ್ರತಿರೋಧಕ ಶಕ್ತಿ ವೃದ್ಧಿ ಮಾಡುವುದು ಮತ್ತು ದೀರ್ಘಕಾಲಿಕ ಕಾಯಿಲೆಗಳಿಂದ ಇದು ರಕ್ಷಣೆ ನೀಡುವುದು.

ಶುಂಠಿಯಲ್ಲಿ ಉರಿಯೂತ ಶಮನಕಾರಿ ಗುಣಗಳಿದ್ದು, ಇದು ಸೋಂಕಿನ ಅಪಾಯ ತಗ್ಗಿಸುವುದು ಮತ್ತು ಸಂಪೂರ್ಣ ಪ್ರತಿರೋಧಕ ವ್ಯವಸ್ಥೆಗೆ ಸಹಕಾರಿ. ಶುಂಠಿ ಪಾನೀಯ ಸೇವನೆ ಮಾಡಿದರೆ ಆಗ ಇದ–ರಿಂದ ಈ ಅಂಶಗಳನ್ನು ದೇಹವು ಹೀರಿಕೊಳ್ಳುವುದು ಮತ್ತು ಪ್ರತಿನಿತ್ಯವೂ ದೇಹವು ಬಲಿಷ್ಠ ಪ್ರತಿರೋಧಕ ವ್ಯವಸ್ಥೆ ಜತೆಗೆ ಆರಂಭ ಮಾಡಬಹುದು.

ಉರಿಯೂತ, ನೋವು ತಗ್ಗಿಸುವುದು

ಸಂಧಿವಾತ, ಹೃದಯರಕ್ತನಾಳದ ಕಾಯಿಲೆಗಳಿಗೆ ದೀರ್ಘಕಾಲಿಕ ಉರಿಯೂತವು ಪ್ರಮುಖ ಕಾರಣವಾಗಿದೆ. ಶುಂಠಿಯಲ್ಲಿ ಇರುವ ಜಿಂಜರಾಲ್ ಮತ್ತು ಶಾಗೋಲ್ ಅಂಶವು ಉರಿಯೂತ ಕಡಿಮೆ ಮಾಡಲು ತುಂಬಾ ಸಹಕಾರಿ ಆಗಿದೆ. ಶುಂಠಿಯು ಸ್ನಾಯುಗಳಲ್ಲಿನ ಉರಿಯೂತ ಕಡಿಮೆ ಮಾಡುವುದು ಮತ್ತು ಊತ ತಗ್ಗಿಸುವುದು. ಇದರಿಂದ ನೈಸರ್ಗಿಕವಾಗಿ ಉರಿಯೂತ ಕಡಿಮೆ ಆಗುವುದು.

ತ್ವಚೆಯ ಆರೋಗ್ಯ ರಕ್ಷಿಸುವುದು

ತ್ವಚೆಯು ಸಂಪೂರ್ಣ ಆರೋಗ್ಯದ ಕೈಗನ್ನಡಿಯಾಗಿದೆ. ಶುಂಠಿಯು ತ್ವಚೆಯ ಕಾಂತಿ ವೃದ್ಧಿಸಲು ನೆರವಾಗುವುದು. ಚರ್ಮಕ್ಕೆ ಹಾನಿ ಉಂಟು ಮಾಡುವ ಮತ್ತು ವಯಸ್ಸಾಗುವ ಲಕ್ಷಣಗಳನ್ನು ತೋರಿಸುವ ಫ್ರೀ ರ್ಯಾಡಿಕಲ್ ವಿರುದ್ಧ ಶುಂಠಿಯಲ್ಲಿ ಇರುವ ಆ?ಯಂಟಿಆಕ್ಸಿಡೆಂಟ್ ನೆರವಾಗುವುದು.

ಈ ಆ?ಯಂಟಿಆಕ್ಸಿಡೆಂಟ್ ಗಳು ಚರ್ಮವನ್ನು ಯುವಿ ಕಿರಣಗಳಿಂದ ರಕ್ಷಿಸುವುದು ಮತ್ತು ಚರ್ಮದ ಸ್ಥಿತಿಸ್ಥಾಪಕತ್ವ ವೃದ್ಧಿಸುವುದು ಎಂದು ಅಧ್ಯಯನಗಳು ತಿಳಿಸಿವೆ. ಶುಂಠಿಯಲ್ಲಿ ಉರಿಯೂತ ಶಮನಕಾರಿ ಗುಣಗಳಿವೆ ಮತ್ತು ಇದು ಮೊಡವೆ ಹಾಗೂ ಚರ್ಮದ ಕಿರಿಕಿರಿ ತಡೆಯುವುದು.

ತಿನ್ನುವಾಗ ನಿಂಬೆಹಣ್ಣಿನ ಸಿಪ್ಪೆ ಸೇರಿಸಿ ತಿಂದರೆ ಇಷ್ಟೊಂದು ಆರೋಗ್ಯ ಪ್ರಯೋಜನಗಳು ಸಿಗುತ್ತವಾ?



ನಿಂಬೆಹಣ್ಣು ಎಂದ ತಕ್ಷಣ ನಮಗೆ ಕೋವಿಡ್ ಸಂದರ್ಭ ಜ್ಞಾಪಕಕ್ಕೆ ಬರುತ್ತದೆ. ಏಕೆಂದರೆ ಆ ಸಂದರ್ಭದಲ್ಲಿ ರೋಗ ನಿರೋಧಕ ಶಕ್ತಿಯ ಕೊರತೆ ಎಂತಹವರ ಪ್ರಾಣವನ್ನು ಬೇಕಾದರೂ ತೆಗೆಯುತ್ತಿತ್ತು. ಆಗ ನೆರವಿಗೆ ಬಂದಿದ್ದೆ ವಿಟಮಿನ್ ಸಿ ಪ್ರಮಾಣ ಹೆಚ್ಚಾಗಿರುವ ನಿಂಬೆಹಣ್ಣು.

ನಿಂಬೆಹಣ್ಣು ನಮ್ಮ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುವಲ್ಲಿ ಮಾತ್ರ ನೆರವಾಗುತ್ತಿತ್ತು ಎನ್ನಲಾರದು. ಬಗೆ ಬಗೆಯ ಆರೋಗ್ಯ ಸಮಸ್ಯೆಗಳನ್ನು ಕೂಡ ಇದು ದೂರ ಮಾಡುತ್ತಿತ್ತು. ನಿಂಬೆಹಣ್ಣಿನ ಆರೋಗ್ಯ ಪ್ರಯೋಜನಗಳು ಈ ರೀತಿ ಹೇಳುತ್ತಾ ಹೋದರೆ ಬೇಕಾದಷ್ಟಿವೆ. ಆದರೆ ನಿಂಬೆಹಣ್ಣಿನ ಸಿಪ್ಪೆಯ ಬಗ್ಗೆ ನಾವು ಸಾಮಾನ್ಯವಾಗಿ ಅಷ್ಟಾಗಿ ತಲೆಕೆಡಿಸಿಕೊಳ್ಳುವುದಿಲ್ಲ. ನಿಂಬೆಹಣ್ಣಿನ ಸಿಪ್ಪೆ ಕೂಡ ನಿಂಬೆಹಣ್ಣಿನಷ್ಟೇ ಪವರ್ಫುಲ್! ಇದು ಕೂಡ ಅನೇಕ ಆರೋಗ್ಯ ಪ್ರಯೋಜನಗಳನ್ನು ಈ ಕೆಳಗಿನಂತೆ ಒಳಗೊಂಡಿದೆ.

ಕರುಳಿನ ಕ್ಯಾನ್ಸರ್ ವಿರುದ್ಧ ರಕ್ಷಣೆ

ನಿಂಬೆಹಣ್ಣು ಅಥವಾ ಕಿತ್ತಳೆ ಹಣ್ಣಿನ ಸಿಪ್ಪೆ ಕ್ಯಾನ್ಸರ್ ವಿರೋಧಿ ಲಕ್ಷಣಗಳನ್ನು ಒಳಗೊಂಡಿರುತ್ತದೆ. ಇದು ನಮ್ಮ ಕರುಳಿನ ಭಾಗದಲ್ಲಿ ಗೆಡ್ಡೆ ಅಥವಾ ಕ್ಯಾನ್ಸರ್ ಉಂಟಾಗದಂತೆ ನೋಡಿಕೊಳ್ಳುತ್ತದೆ.

ನಿಂಬೆಹಣ್ಣಿನ ಸಿಪ್ಪೆ ತನ್ನಲ್ಲಿ ಜುಥ–ಟುಟಿ ಮತ್ತು ಛಿಜಠಿಜಡಿಜುಟಿ ಪ್ರಮಾಣ ವನ್ನು ಒಳಗೊಂಡಿರುವುದರಿಂದ ಕರುಳಿನ ಭಾಗದಲ್ಲಿ ಕ್ಯಾನ್ಸರ್ ಉಂಟಾಗದಂತೆ ಇದು ನೋಡಿಕೊಳ್ಳುತ್ತದೆ.

ಪ್ರೋಸ್ಟೆಟ್ ಕ್ಯಾನ್ಸರ್ ವಿರುದ್ಧ ರಕ್ಷಣೆ

ಪುರುಷರಲ್ಲಿ ಕಂಡುಬರುವ ಪ್ರೋಸ್ಟೆಟ್ ಕ್ಯಾನ್ಸರ್ ವಿರುದ್ಧ ರಕ್ಷಣೆ ನೀಡುವಲ್ಲಿ ನಿಂಬೆಹಣ್ಣಿನ ಸಿಪ್ಪೆ ಅತ್ಯಂತ ಪರಿಣಾಮಕಾರಿಯಾಗಿ ಕೆಲಸ ಮಾಡುತ್ತದೆ. ಅಷ್ಟೇ ಅಲ್ಲದೆ ಪ್ರೋಸ್ಟೆಟ್ ಕ್ಯಾನ್ಸರ್ ಗಡ್ಡೆ ಮೆಟಾಸ್ಟಾಸಿಸ್ ಆಗಿ ಬದಲಾಗುವುದನ್ನು ಇದು ತಪ್ಪಿಸುತ್ತದೆ. ಜೀವಕೋಶಗಳು ಹಾಳಾಗದಂತೆ ತಡೆಯುತ್ತದೆ.

ಹೃದಯದ ಕಾಯಿ

ಇಂದು,ನಾಳೆ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಪರೀಕ್ಷೆ

ಪಾರದರ್ಶಕ ಹಾಗೂ ವ್ಯವಸ್ಥಿತವಾಗಿ ಪರೀಕ್ಷೆ ನಡೆಸಲು ಸೂಚನೆ-ಅಪರ ಜಿಲ್ಲಾಧಿಕಾರಿ ಡಾ.ಎಲ್.ನಾಗರಾಜ

ಹಾವೇರಿ.: ಕರ್ನಾಟಕ ಲೋಕಸೇವಾ ಆಯೋಗದಿಂದ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಪೂರ್ವಭಾವಿ ಪರೀಕ್ಷೆ ಡಿ.7 ಮತ್ತು 8 ರಂದು ಹಾವೇರಿ ಹಾಗೂ ರಾಣೇವೆನ್ನೂನಗರದ 28 ಕೇಂದ್ರಗಳಲ್ಲಿ ಪರೀಕ್ಷೆ ಜರುಗಲಿದ್ದು, ಯಾವುದೇ ಲೋಪವಾಗದಂತೆ ವ್ಯವಸ್ಥಿತವಾಗಿ ಹಾಗೂ ಪಾರದರ್ಶಕವಾಗಿ ಪರೀಕ್ಷೆ ನಡೆಸಬೇಕು ಎಂದು ಪರೀಕ್ಷಾ ಕಾರ್ಯಕ್ಕೆ ನಿಯೋಜಿತ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಡಾ.ಎಲ್.ನಾಗರಾಜ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವರ ಕರ್ನಾಟಕ ಲೋಕಸೇವಾ ಆಯೋಗದಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ ಉಳಿಕೆ ಮೂಲ ವೃಂದದ-150 ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳ ವಿ ಪರೀಕ್ಷೆ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಈ ಪರೀಕ್ಷಾ ಕಾರ್ಯಕ್ಕೆ ನಿಯೋಜಿಸಲಾದ ವಿವಿಧ ಇಲಾಖೆ ಅಧಿಕಾರಿಗಳು, ಮಾರ್ಗಾಧಿಕಾರಿಗಳು, ವೀಕ್ಷಕರು, ಕೊಠಡಿ ಮೇಲ್ವಿಚಾರಕರು ತಮ್ಮ ಕರ್ತವ್ಯಗಳಲ್ಲಿ ಯಾವುದೇ ಲೋಪವಾಗದಂತೆ ಜವಾಬ್ದಾರಿಯಿಂದ ಹಾಗೂ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡಬಾರದು. ಪರೀಕ್ಷಾ ಕರ್ತವ್ಯಕ್ಕೆ ನಿಯೋಜಿತಗೊಂಡ ಅಧಿಕಾರಿಗಳು, ಉಪನ್ಯಾಸಕರು ಪರೀಕ್ಷಾ ನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಪರೀಕ್ಷಾ ಕೇಂದ್ರದ ಹೊರ ವಲಯ ಹಾಗೂ ಕೊಠಡಿಯ ಒಳಗೆ ಶಿಸ್ತುಬದ್ಧವಾಗಿ ಪರೀಕ್ಷಾ ನಿಯಮಗಳ ಉಲ್ಲಂಘನೆಯಾಗದಂತೆ ಎಚ್ಚರಿಕೆಯಿಂದ ಕಾರ್ಯನಿರ್ವಸಬೇಕು ಎಂದು ನಿರ್ದೇಶನ ನೀಡಿದರು.

ಸಿಸಿ ಟಿವಿ ಕಡ್ಡಾಯ: ಎಲ್ಲ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿ ಟಿವಿ , ಜಾಮರ್ ಅಳವಡಿಕೆ ಹಾಗೂ ಕೊಠಡಿಯೊಳಗೆ ಗಡಿಯಾರ ಕಡ್ಡಾಯವಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಪರೀಕ್ಷಾರ್ಥಿಗಳಿಗೆ ಶುದ್ಧ ಕುಡಿಯುವ ನೀರು, ಸೂಕ್ತ ಪೀಠೋಪಕರಣ ಒಳಗೊಂಡಂತೆ ಮೂಲಭೂತ ಸೌಕರ್ಯ ಒದಗಿಸಬೇಕು. ಪರೀಕ್ಷಾ ವೀಕ್ಷಕರು ಈ ಕುರಿಂತೆ ಪೂರ್ವ ಪರಿಶೀಲನೆ ನಡೆಸಿ ನಿಯಮಾನುಸಾರ ಮೂಲ ಸೌಕರ್ಯಗಳ ಕುರಿತಂತೆ ಖಚಿತಪಡಿಸಿಕೊಳ್ಳಲು ಸೂಚನೆ ನೀಡಿದರು.

ಪರೀಕ್ಷೆಗೆ ನಿಯೋಜಿತ ಮೇಲ್ವಿಚಾರಕರು ಸಮಯಕ್ಕೆ ಸರಿಯಾಗಿ ಹಾಜರಾಗಬೇಕು. ಪರೀಕ್ಷಾ ಕಾರ್ಯಕ್ಕೆ ನಿಯೋಜಿತ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ಹೊರತುಪಡಿಸಿ ಬೇರೆಯವರಿಗೆ ಪರೀಕ್ಷಾ ಕೇಂದ್ರಗಳಲ್ಲಿ ಪ್ರವೇಶ ಇರುವುದಿಲ್ಲ ಎಂದು ತಿಳಿಸಿದ ಅವರು, ಸಿಸಿ ಕ್ಯಾಮರಾ ಕಣ್ಗಾವಲಿನಲ್ಲೇ ಪ್ರಶ್ನೆ ಪತ್ರಿಕೆ ತೆರೆಯುವುದು ಹಾಗೂ ಉತ್ತರ ಪತ್ರಿಕೆ ಬಂಡಲ್ ಮಾಡಬೇಕು ಎಂದು ಸೂಚನೆ ನೀಡಿದರು.

ಎರಡು ದಿನ ಪರೀಕ್ಷೆ: ಡಿಸೆಂಬರ್ 7 ರಂದು 24 ಪರೀಕ್ಷಾ ಕೇಂದ್ರಗಳಲ್ಲಿ ಮಧ್ಯಾಹ್ನ 2 ರಿಂದ 4ರವರೆಗೆ ಒಂದು ಅವಧಿಯಲ್ಲಿ ಪರೀಕ್ಷೆ ನಡೆಯಲಿದೆ. 5,422 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಡಿಸೆಂಬರ್ 8 ರಂದು 28 ಪರೀಕ್ಷಾ ಕೇಂದ್ರಗಳಲ್ಲಿ ಬೆಳಗ್ಗೆ 10 ರಿಂದ 11-30 ಹಾಗೂ ಮಧ್ಯಾಹ್ನ 2 ರಿಂದ 4 ಗಂಟೆವರೆಗೆ ಎರಡು ಹಂತದಲ್ಲಿ ಪರೀಕ್ಷೆ ನಡೆಯಲಿದೆ. 10,526 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದರು.

ಇಲೆಕ್ಟ್ರಾನಿಕ್ ಉಪಕರಣಗಳ ನಿಷೇಧ: ಪರೀಕ್ಷಾರ್ಥಿಗಳು ಅಥವಾ ಕೊಠಡಿಯ ಮೇಲ್ವಿಚಾರಕರಾಗಲಿ ಪರೀಕ್ಷಾ ಕೇಂದ್ರದೊಳಗೆ ಅತ್ಯಾಧುನಿಕ ಇಲೆಕ್ಟ್ರಾನಿಕ್ ಉಪಕರಣಗಳಾದ ಮೊಬೈಲ್, ಬ್ಲೂಟೂತ್, ಪೇಜರ್, ವೈರಲೆಸ್ ಸೆಟ್ ಹಾಗೂ ರಿಸ್ಟ್ ವಾಚ್‌ಗಳನ್ನು ನಿಷೇಧಿಸಿದೆ. ಈ ಕುರಿತಂತೆ ಅಧಿಕಾರಿಗಳು ಎಚ್ಚರವಹಿಸಬೇಕು ಎಂದು ಸೂಚಿಸಿದರು.

ವಸ್ತ್ರ ಸಂಹಿತೆ: ಪರೀಕ್ಷಾರ್ಥಿಗಳು ತುಂಬು ತೋಳಿನ ಶರ್ಟ್, ಟಿ ಶರ್ಟ್, ಪದರುಗಳುಳ್ಳ ವಿವಿಧ ರೀತಿಯ ವಿನ್ಯಾಸವುಳ್ಳ ವಸ್ತ್ರಗಳನ್ನು ಧರಿಸುವುದನ್ನು ನಿಷೇಧಿಸಿದೆ. ಸರಳ ಉಡುಪು ಧರಿಸಿ ಪರೀಕ್ಷೆಗೆ ಹಾಜರಾಗಬೇಕು. ಯಾವುದೇ ರೀತಿಯ ಆಭರಣಗಳನ್ನು ಧರಿಸುವಂತಿಲ್ಲ(ಮಂಗಳ ಸೂತ್ರ ಮತ್ತು ಕಾಲುಂಗುರ ಹೊರತುಪಡಿಸಿ). ಶೂ ಮತ್ತು ಸಾಕ್ಸ್ ಧರಿಸುವುದನ್ನು ನಿಷೇಧಿಸಲಾಗಿದೆ. ಸರಳ ಚಪ್ಪಲಿ ಧರಿಸಬೇಕು.

ಪರೀಕ್ಷೆಗೆ ನೋಂದಾಯಿಸಿಕೊಂಡ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ಮೂಲ ಪರೀಕ್ಷಾ ಪ್ರವೇಶ ಪತ್ರ ಹಾಗೂ ಐಡಿ ಕಾರ್ಡ್ ತರಬೇಕು ಎಂದರು.

200 ಮೀಟರ್ ಪ್ರದೇಶ ನಿಷೇಧ: ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್‌ವರೆಗೆ ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿದೆ. ನಿಷೇಧಿತ ವಲಯದಲ್ಲಿ ಝೆರಾಕ್ಸ್ ಹಾಗೂ ಸೈಬರ್ ಕೆಫೆಗಳನ್ನು ಮುಚ್ಚಲು ಆದೇಶಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಡಾ.ಉಮೇಶಪ್ಪ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಸುರೇಶ ಹುಗ್ಗಿ, ಡಿವೈಎಸ್‌ಪಿ ಗಿರೀಶ ಭೋಜಣ್ಣನವರ, ತಹಶೀಲ್ದಾರ ಶ್ರೀಮತಿ ಶರಣಮ್ಮ, ವಿವಿಧ ಇಲಾಖೆಗಳ ಅಧಿಕಾರಿಗಳು, ತಾಲೂಕಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

ನಿವೃತ್ತಿ ಹೊಂದಿದ ಯೋಧ ಸಿದ್ದಪ್ಪ ಕಟ್ಟಿಕಾರರ ಸ್ವಾಗತ ಸಮಾರಂಭ

ಯೋಧ ಮತ್ತು ರೈತ ದೇಶದ ಎರಡು ಕಣ್ಣುಗಳಿದ್ದಂತೆ-ಅಮರಸಿದ್ದೇಶ್ವರ ಶ್ರೀಗಳು

ಘಟಪ್ರಭಾ: ದೇಶ ಕಾಯುವ ಯೋಧ ಮತ್ತು ಅನ್ನ ನೀಡುವ ರೈತ ದೇಶದ ಎರಡು ಕಣ್ಣುಗಳಿದ್ದಂತೆ ಎಂದು ಅಂಕಲಗಿಯ ಶ್ರೀ ಅಮರಸಿದ್ದೇಶ್ವರ ಮಹಾಸ್ವಾಮಿಗಳು ಹೇಳಿದರು.

ಅವರು ಸಮೀಪದ ಶಿಂದಿಕುರಬೇಟ ಗ್ರಾಮದಲ್ಲಿ ಭಾರತೀಯ ಸೇನೆಯಲ್ಲಿ ಕಳೆದ 16 ವರ್ಷಗಳಿಂದ ದೇಶ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿ ಪ್ರಥಮ ಬಾರಿಗೆ ಶಿಂದಿಕುರಬೇಟ ಸ್ವ ಗ್ರಾಮಕ್ಕೆ ಆಗಮಿಸಿದ ನಿವೃತ್ತ ಯೋಧ ಸಿದ್ದಪ್ಪ ವಿಠ್ಠಲ ಕಟ್ಟಿಕಾರ ಅವರ ಸ್ವಾಗತ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು.

ಸೈನಿಕ ಮತ್ತು ರೈತ ಇವರುಗಳ ಸೇವೆ ದೇಶಕ್ಕೆ ಅಪಾರವಾಗಿದೆ. ಸೈನಿಕ ಸಿದ್ದಪ್ಪ ಕಟ್ಟಿಕಾರ ಅವರು ಕುಸ್ತಿ ಪೈಲ್ವಾನ್‌ರಾಗಿದ್ದು ಎರಡು ಬಾರಿ ಕರ್ನಾಟಕ ಕುಮಾರ ಪ್ರಶಸ್ತಿಯನ್ನು ಪಡೆದುಕೊಂಡು ಉತ್ತಮ ಕುಸ್ತಿ ಪಟುವಾಗಿ ಜೊತೆಗೆ ಒಳ್ಳೇಯ ತರಬೇತಿದಾರರಾಗಿ ಕನ್ನಡ ನಾಡಿಗೆ ಕೀರ್ತಿ ತಂದಿದ್ದಾರೆ. ಸೇನೆಯಲ್ಲಿ ಸೇವೆ ಸಲ್ಲಿಸುತ್ತಿದ್ದರೂ ಶಿಂದಿಕುರಬೇಟ ಗ್ರಾಮದ ಆರಾಧ್ಯ ದೇವರಾದ ಶ್ರೀ ವಿಠ್ಠಲ ದೇವರ ಸೇವೆಯನ್ನು ಕೂಡಾ ಮಾಡುತ್ತಿರುವುದು ದೇಶ ಸೇವೆಯೇ ಈಶನ ಸೇವೆ ಮುಂದುವರಿಯಲಿ ಭಗವಂತನು ಕಟ್ಟಿಕಾರ ಅವರ ನಿವೃತ್ತಿ ಜೀವನವನ್ನು ಸುಖಮಯದಿಂದ ಇರಲಿ ಎಂದು ಶುಭ ಹಾರೈಸಿದರು.

ನಿವೃತ್ತ ಸೈನಿಕ ಸಿದ್ದಪ್ಪ ಕಟ್ಟಿಕಾರ ಅವರನ್ನು ಶಿಂದಿಕುರಬೇಟ ಗ್ರಾಮದ ಗ್ರಾಮಸ್ಥರು ಹಾಗೂ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸೇರಿಕೊಂಡು ಗ್ರಾಮದ ಪ್ರಮುಖ ಬೀದಿಗಳಲ್ಲಿ ತೆರೆದ ವಾಹನದಲ್ಲಿ ಅವರನ್ನು ಸನ್ಮಾನಿಸಿ ಗೌರವಿಸಿ ಭವ್ಯ ಮೆರವಣಿಗೆಯ ಮೂಲಕ ಸ್ವಾಗತ ಕೋರಿದರು.

ವೇದಿಕೆ ಮೇಲೆ ಬಸವೇಶ್ವರ ದೇವರ ದೇವಋಷಿಗಳಾದ ಬಸವರಾಜ ಕಬ್ಬೂರ ಸಾನಿಧ್ಯ ವಹಿಸಿದ್ದರು. ಬೆಳಗಾವಿಯ ಹಾಗೂ ಗ್ರಾಮದ ನಿವೃತ್ತ ಸೈನಿಕರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಶಿಕ್ಷಕ ಎಂ.ಎಸ್. ಬೆಳಗಲಿ ಸ್ವಾಗತಿಸಿ, ನಿರೂಪಿಸಿದರು.

******

ಇಂದಿನಿಂದ ಕ್ಷಯರೋಗ ತಿಳುವಳಿಕೆ ಮತ್ತು ಸಿವೈ-ಟಿಬಿ ಪರೀಕ್ಷೆ ಆಂದೋಲನ

ಹಾವೇರಿ: ನೂರು ದಿನಗಳ ಕ್ಷಯರೋಗ ತಿಳುವಳಿಕೆ ಮತ್ತು ಸಿವೈ-ಟಿಬಿ ಪರೀಕ್ಷೆ ಆಂದೋಲನ ಕಾರ್ಯಕ್ರಮ ಡಿಸೆಂಬರ್ 7 ರಿಂದ 17 ಮಾರ್ಚ್ 2025ರವರೆಗೆ ಹಮ್ಮಿಕೊಳ್ಳಲಾಗಿದ್ದು, ಡಿ.7 ರಂದು ಬೆಳಗ್ಗೆ 10 ಗಂಟೆಗೆ ಹಾವೇರಿ ಜಿಲ್ಲಾ ಆರೋಗ್ಯ ಭವನದಲ್ಲಿ ಉದ್ಘಾಟನಾ ಕಾರ್ಯಕ್ರಮ ಜರುಗಲಿದೆ ಎಂದು ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವೀರವನಿತೆ ಒನಕೆ ಓಬವ್ವ ಜಯಂತಿ ವಿಜೃಂಭಣೆಯಿಂದ ಆಚರಣೆ -ಅಪರ ಜಿಲ್ಲಾಧಿಕಾರಿ ನಾಗರಾಜ

ಹಾವೇರಿ: ಜಿಲ್ಲಾ ಮಟ್ಟದಲ್ಲಿ ವೀರವನಿತೆ ಒನಕೆ ಓಬವ್ವ ಜಯಂತಿ ವಿಜೃಂಭಣೆಯಿಂದ ಆಚರಣೆಗೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ನಾಗರಾಜ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ವೀರವನಿತೆ ಒನಕೆ ಓಬವ್ವ ಜಯಂತಿ ಆಚರಣೆ ಪೂರ್ವ ಸಿದ್ಧತೆ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಡಿಸೆಂಬರ್ 14 ರಂದು ಬೆಳಗ್ಗೆ 11 ಗಂಟೆಗೆ ಹಾವೇರಿ ನಗರದ ಜಿಲ್ಲಾ ಗುರುಭವನದಲ್ಲಿ ವೇದಿಕೆ ಕಾರ್ಯಕ್ರಮ ಹಾಗೂ ಬೆಳಗ್ಗೆ 9 ಗಂಟೆಗೆ ಪುರಸಿದ್ದೇಶ್ವರ ದೇವಸ್ಥಾನದಿಂದ ಮೆರವಣಿಗೆ ಜರುಗಲಿದೆ ಎಂದರು.

ಮೆರವಣಿಗೆಗೆ ಕಲಾ ತಂಡ, ಪೊಲೀಸ್ ಬಂದೋಬಸ್ತ್, ವೇದಿಕೆ, ಆಸನ, ಕುಡಿಯುವ ನೀರು, ಆಮಂತ್ರಣಪತ್ರಿಕೆ, ಉಪಹಾರ, ಉಪನ್ಯಾಸಕ ಆಯ್ಕೆ ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಆರ್.ವಿ.ಚಿನ್ನಿಕಟ್ಟಿ ಅವರು ಕಾರ್ಯಕ್ರಮದ ರೂಪರೇಷೆಗಳ ಕುರಿತು ಮಾಹಿತಿ ನೀಡಿದರು. ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಸಭೆಯಲ್ಲಿ ಉಪಸ್ಥಿತರಿದ್ದರು.

ಅರ್ಜಿ ಆಹ್ವಾನ

ಧಾರವಾಡ : ಧಾರವಾಡ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿನ ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಖಾಲಿ ಇರುವ ಗ್ರಾಮ ಒನ್ ಕೇಂದ್ರದ ಫ್ರಾಂಚೈಸಿಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಧಾರವಾಡ ತಾಲೂಕಿನ ಚಿಕ್ಕಮಲ್ಲಿಗವಾಡ ಮತ್ತು ನರೇಂದ್ರ ಗ್ರಾಮಪಂಚಾಯಿತಿ ಕೇಂದ್ರ, ಅಳ್ನಾವರ ತಾಲೂಕಿನ ಅರವಟಗಿ ಗ್ರಾಮಪಂಚಾಯಿತಿ ಕೇಂದ್ರ, ಕಲಘಟಗಿ ತಾಲೂಕಿನ ಸೂರಶೆಟ್ಟಿಕೊಪ್ಪ ಗ್ರಾಮಪಂಚಾಯಿತಿಗಳ ವ್ಯಾಪ್ತಿಯಲ್ಲಿ ಗ್ರಾಮ ಒನ್ ಕೇಂದ್ರದ ಫ್ರಾಂಚೈಸಿಗಳನ್ನು ಆರಂಭಿಸಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಅರ್ಜಿ ಸಲ್ಲಿಸಲು ಪಿಯುಸಿ, ಐಟಿಐ, ಡಿಪ್ಲೋಮಾ, ಪದವಿ, ಸ್ನಾತ್ತಕೋತ್ತರ ಪದವಿಯೊಂದಿಗೆ ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಗ್ರಾಮ ಒನ ಕೇಂದ್ರ ಸ್ಥಾಪಿಸಲು ಕನಿಷ್ಟ 100 ಚದರ ಅಡಿ ವಿಸ್ತೀರ್ಣವುಳ್ಳ ಸುಸಜ್ಜಿತ ಕಟ್ಟಡದೊಂದಿಗೆ ಕಂಪ್ಯೂಟರ್, ಪ್ರಿಂಟರ್, ಸ್ಕ್ಯಾನರ್, ಬಯೋಮೆಟ್ರಿಕ್ ಡಿವೈಸ್, ಮತ್ತು 8 ಗಂಟೆಗಳ ವಿದ್ಯುತ್ ಪರ್ಯಾಯ ವ್ಯವಸ್ಥೆ ಇರಬೇಕು. ಇಲಾಖೆ ಕಾಲ ಕಾಲಕ್ಕೆ ಸೂಚಿಸುವ ಮಾನದಂಡಗಳಿಗೆ ಬದ್ಧರಾಗಿರುವವರು ಡಿಸೆಂಬರ 15, 2024 ರೊಳಗಾಗಿ ವೆಬ್‌ಸೈಟ್ https://www.karnatakaone.gov.in/Public/GramOneFranchiseeTerms ಮೂಲಕ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9019026687, 9019026697, 9019026690, 9019027696 ಗೆ ಸಂಪರ್ಕಿಸಬಹುದು ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಜಿ ಆಹ್ವಾನ

ಧಾರವಾಡ : 2024-25 ನೇ ಸಾಲಿನಲ್ಲಿ ನ್ಯಾಷನಲ್ ಕೌನ್ಸಿಲ್ ಫಾರ್ ಟೀಚರ್ ಎಜುಕೇಷನ್‌ನಿಂದ ಮಾನ್ಯತೆ ಪಡೆದಿರುವ ಧಾರವಾಡ ಜಿಲ್ಲೆಯಲ್ಲಿನ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ದಾಖಲಾತಿ ಹೊಂದಿ, ಬಿ.ಎಡ್ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ರೂ.25,000 ಗಳ ವಿಶೇಷ ಪ್ರೋತ್ಸಾಹಧನ ನೀಡುವುದಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅರ್ಹ ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್, ಬೌದ್ಧ, ಪರ್ಶಿಯನ್ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳು, ಡಿಸೆಂಬರ್ 25, 2024 ರೊಳಗಾಗಿ https://sevasindu.karanataka. gov.in ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836-2971590 ಗೆ ಸಂಪರ್ಕಿಸಬಹುದು ಅಥವಾ ಧಾರವಾಡದ ಸಾಧನಕೇರಿ ರಸ್ತೆ, ಸರ್ಕಾರಿ ಮುದ್ರಣಾಲಯ ಹತ್ತಿರ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನಾ ಆಝಾದ ಭವನಕ್ಕೆ ಭೇಟಿ ನೀಡಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನರೇಂದ್ರ, ಕುರಬಗಟ್ಟಿ ಗ್ರಾಮಗಳಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಭೇಟಿ; ವಿವಿಧ ಯೋಜನೆಗಳ ಪರಿಶೀಲನೆ

ಧಾರವಾಡ : ಧಾರವಾಡ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಪಂಚಾಯತ ಆಡಳಿತಾಧಿಕಾರಿಗಳಾದ ಡಾ. ರಾಮ್ ಪ್ರಸಾತ್ ಮನೋಹರ ಅವರು ಇಂದು ಮಧ್ಯಾಹ್ನ ಧಾರವಾಡ ತಾಲೂಕಿನ ಗ್ರಾಮಗಳಿಗೆ ಭೇಟಿ ನೀಡಿ, ಜಿಲ್ಲಾ ಪಂಚಾಯತ ವ್ಯಾಪ್ತಿಯ ವಿವಿಧ ಕಾಮಗಾರಿ, ಯೋಜನಾ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

ನರೇಂದ್ರ ಗ್ರಾಮ ವ್ಯಾಪ್ತಿಯ ಕಾಯಕನಗರದ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ, ಕಟ್ಟಡ ಪರಿಶೀಲಿಸಿದರು. ಮಕ್ಕಳ ದಾಖಲಾತಿ, ಪೊಷನ್ ಅಭಿಯಾನದ ಪ್ರಗತಿ ಬಗ್ಗೆ ಮಾಹಿತಿ ಪಡೆದುಕೊಂಡರು.

ನಂತರ ಅವರು ಕುರಬಗಟ್ಟಿ ಗ್ರಾಮದಲ್ಲಿರುವ ಘನ ತ್ಯಾಜ್ಯ ವಿಲೇವಾರಿ ಘಟಕಕ್ಕೆ ಭೇಟಿ ನೀಡಿ, ಘಟಕದ ಕಾರ್ಯ ನಿರ್ವಹಣೆ ಬಗ್ಗೆ ಅದನ್ನು ನಿರ್ವಹಿಸುತ್ತಿರುವ ಸ್ತ್ರಿ ಶಕ್ತಿ ಸ್ವ ಸಹಾಯ ಸಂಘದ ಸದಸ್ಯರಿಂದ ಮಾಹಿತಿ ಪಡೆದುಕೊಂಡರು. ಮತ್ತು ಜಲ ಜೀವನ ಮಿಷನ್ ಯೋಜನೆಯಲ್ಲಿ ನೂತನವಾಗಿ ನಿರ್ಮಿಸಿರುವ ಮೇಲ್ಮಟ್ಟದ ಜಲಸಂಗ್ರಹಗಾರ ಓಎಚ್‌ಟಿಗೆ ಭೇಟಿ ನೀಡಿದರು.

ನಂತರ ಕುರಬಗಟ್ಟಿ ಗ್ರಾಮ ಪಂಚಾಯತದ ಡಿಜಿಟಲ್ ಗ್ರಂಥಾಲಯ ವೀಕ್ಷಿಸಿ, ಅದರ ಕಾರ್ಯ ನಿರ್ವಹಣೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಅಲ್ಲಿನ ಕೂಸಿನ ಮನೆಗೆ ತೆರಳಿ, ಮಕ್ಕಳ ಆಟ ಪಾಠದ ಬಗ್ಗೆ ವಿವರ ಪಡೆದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ. ಅವರು ಜಿಲ್ಲಾ ಪಂಚಾಯತ ಕಾರ್ಯ ಚಟುವಟಿಕೆ, ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಎಚ್.ಎಚ್.ಕುಕನೂರ, ತಾಲೂಕು ಪಂಚಾಯತ ಇಓ ಗಂಗಾಧರ ಕಂದಕೂರ, ಸಹಾಯಕ ನಿರ್ದೇಶಕ ಚಂದ್ರು ಪೂಜಾರ, ಸದಾನಂದ ಅಮರಾಪುರ, ಸಿಡಿಪಿಓ, ಪಿಡಿಓ ನಾಗರತ್ನಾ ತಪೇಲಿ, ಗ್

ಡಿ.ಉಮಾಪತಿಯವರಿಗೆ ವಡ್ಡರ್ಸೆ ರಘುರಾಮಶೆಟ್ಟಿ ಸಾಮಾಜಿಕ ನ್ಯಾಯ ಪತ್ರಿಕೋದ್ಯಮ ಪ್ರಶಸ್ತಿ

ವಿಜಯಪುರ, : ಕರ್ನಾಟಕ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪ್ರಸಕ್ತ ವರ್ಷದಿಂದ ಪ್ರಾರಂಭಿಸಿರುವ "ವಡ್ಡರ್ಸೆ ರಘುರಾಮಶೆಟ್ಟಿ ಸಾಮಾಜಿಕ ನ್ಯಾಯ ಪತ್ರಿಕೋದ್ಯಮ" ಪ್ರಶಸ್ತಿಗೆ ಹಿಸರಾಂತ ಹಿರಿಯ ಪತ್ರಕರ್ತರಾದ ಡಿ.ಉಮಾಪತಿಯವರನ್ನು ಆಯ್ಕೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ ಎಂದು ಇಲಾಖೆಯ ಆಯುಕ್ತರಾದ ಹೇಮಂತ್ ಎಂ.ನಿಂಬಾಳ್ಕರ್ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಪತ್ರಿಕೋದ್ಯಮದಲ್ಲಿ ಸಾಮಾಜಿಕ ನ್ಯಾಯ ಕುರಿತು ವರದಿ ,ವಿಶೇಷ ಲೇಖನಗಳ ಪ್ರಕಟಣೆಯನ್ನು ಗುರುತಿಸಿ,ಗೌರವಿಸುವ ಉದ್ದೇಶದಿಂದ ಮುಖ್ಯಮಂತ್ರಿಯವರು 2024 ರ ಆಯವ್ಯಯದಲ್ಲಿ ಹಿರಿಯ ಪತ್ರಕರ್ತ "ವಡ್ಡರ್ಸೆ ರಘುರಾಮಶೆಟ್ಟಿ" ಅವರ ಹೆಸರಿನಲ್ಲಿ ಸಾಮಾಜಿಕ ನ್ಯಾಯ ಪತ್ರಿಕೋದ್ಯಮ ಪ್ರಶಸ್ತಿ ಘೋಷಿಸಿದ್ದರು. ನ್ಯಾ.ಅಶೋಕ ಹಿಂಚಿಗೇರಿ ಅವರ ಅಧ್ಯಕ್ಷತೆಯಲ್ಲಿ ರಚನೆಯಾಗಿದ್ದ ಪ್ರಶಸ್ತಿ ಆಯ್ಕೆ ಸಮಿತಿಯು ಒಮ್ಮತದಿಂದ ಹಿರಿಯ ಪತ್ರಕರ್ತ ಡಿ.ಉಮಾಪತಿಯವರನ್ನು "ವಡ್ಡರ್ಸೆ ರಘುರಾಮಶೆಟ್ಟಿ ಸಾಮಾಜಿಕ ನ್ಯಾಯ ಪತ್ರಿಕೋದ್ಯಮ ಪ್ರಶಸ್ತಿಗೆ ಆಯ್ಕೆ ಮಾಡಿತ್ತು.ಪ್ರಶಸ್ತಿಯು 2 ಲಕ್ಷ ರೂ.ನಗದು ಹಾಗೂ ಸ್ಮರಣಿಕೆ ಒಳಗೊಂಡಿದೆ.

ಡಿ.ಉಮಾಪತಿ ಅವರ ಪರಿಚಯ:

ಮಾರ್ಚ್ 18,1959 ರಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ಜನಿಸಿದ ಡಿ ಉಮಾಪತಿ ಅವರು ಮೈಸೂರು ಮಹಾರಾಜ ಕಾಲೇಜಿನಲ್ಲಿ ಆಂಗ್ಲ ಸಾಹಿತ್ಯ ಮತ್ತು ಪತ್ರಿಕೋದ್ಯಮದಲ್ಲಿ ಬಿ.ಎ, ಮೈಸೂರು ವಿಶ್ವವಿದ್ಯಾಲಯದಲ್ಲಿ ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿಯನ್ನು ಎರಡನೆ ರ್‍ಯಾಂಕ್ ಪಡೆದವರು. ನ್ಯೂ ಇಂಡಿಯನ್ ಎಕ್ಸಪ್ರೆಸ್ ಸಮೂಹ ಸಂಸ್ಥೆಯ ಕನ್ನಡಪ್ರಭ, ಈ ಟಿವಿಯ ದೆಹಲಿ ಕರೆಸ್ಪಾಂಡೆಂಟ್ ಆಗಿ 27 ವರ್ಷಗಳ ಪರಿಣಾಮಕಾರಿ ವರದಿಗಳಿಂದ ಹೆಸರುಗಳಿಸಿದವರು.

ಪಾರ್ಲಿಮೆಂಟ್ ವರದಿ, ಚುನಾವಣಾ ವಿಶ್ಲೇಷಣೆಗಳು , ಸುಪ್ರೀಂ ಕೋರ್ಟು ಗಳಲ್ಲಿನ ನದಿ ನೀರು ನ್ಯಾಯಾಧೀಕರಣ ವ್ಯಾಜ್ಯಗಳ, ರಾಷ್ಟ್ರಮಟ್ಟದ ರಾಜಕೀಯ ಬೆಳವಣಿಗೆಗಳು, ಮತ್ತು ವಿದೇಶಾಂಗ ಸಚಿವರ ವಿದೇಶ ಪ್ರವಾಸದ ಜೊತೆಗೂಡಿ ರಾಜತಾಂತ್ರಿಕ ವರದಿಗಾರಿಕೆಯಲ್ಲಿ ವಿಶಿಷ್ಟ ಅನುಭವ ಇವರದ್ದಾಗಿದೆ.

ದೆಹಲಿಯಲ್ಲಿ ನೆಲೆಸಿರುವ ಡಿ. ಉಮಾಪತಿ ಅವರು ಆಂದೋಲನ , ರೈತ ಚಳವಳಿ, ವಿಜಯಕರ್ನಾಟಕ, ಪ್ರಜಾವಾಣಿ, ಸಂಯುಕ್ತ ಕರ್ನಾಟಕ, ವಾರ್ತಾಭಾರತಿ ಪತ್ರಿಕೆಗಳಿಗೆ ಅಂಕಣ ಬರಹಗಾರರಾಗಿಯೂ. ಪ್ರಸ್ತುತ 'ನ್ಯಾಯಪಥ(ಗೌರಿ ಮಿಡಿಯಾ)' ಮತ್ತು 'ಈದಿನ' ವೆಬ್ ಜರ್ನಲ್ ಸಂದರ್ಶಕ ಸಂಪಾದಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

'ದೆಹಲಿ ನೋಟ' , 'ಪದಕುಸಿಯೇ ನೆಲವಿಲ್ಲ' ಉಮಾಪತಿ ಅವರ ಎರಡು ಮಹತ್ವದ ಕೃತಿಗಳು ಪ್ರಕಟವಾಗಿವೆ.

ಅಪ್ರೆಂಟಿಶಿಪ್ ತರಬೇತಿಗೆ ಪರಿಶಿಷ್ಟ ಜಾತಿ-ಪಂಗಡದ ಅಭ್ಯರ್ಥಿಗಳಿಂದ ಅರ್ಜಿ ಕರೆ

ಅರ್ಜಿ ಸಲ್ಲಿಸುವ ಅವಧಿ ಡಿ.18ರವರೆಗೆ ವಿಸ್ತರಣೆ

ವಿಜಯಪುರ : ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿಯ ವಿಶೇಷ ಘಟಕ ಹಾಗೂ ಗಿರಿ-ಜನ ಉಪಯೋಜನೆಯಡಿ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪಡೆದ ಹಾಗೂ ಕಂಪ್ಯೂಟರ್ ಜ್ಞಾನಹೊಂದಿದ ಪರಿಶಿಷ್ಟ ಜಾತಿ-ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ 12 ತಿಂಗಳ ಅಪ್ರೆಂಟಿಶಿಪ್ ತರಬೇತಿಗಾಗಿ ಅರ್ಜಿಗಳನ್ನು ಡಿಸೆಂಬರ್ 18ರವರೆಗೆ ಸಲ್ಲಿಸಬಹುದಾಗಿದೆ.

ವಿಜಯಪುರ ಜಿಲ್ಲಾ ಕಚೇರಿಯಲ್ಲಿ ತಲಾ ಒಂದು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ಅಪ್ರೆಂಟಿಶಿಪ್ ತರಬೇತಿಗೆ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದ್ದು, ತರಬೇತಿಗೆ ಮೆರಿಟ್ ಹಾಗೂ ಸಂದರ್ಶನ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾಧ್ಯಮ ಅಕಾಡೆಮಿ ಮೂಲಕ ತರಬೇತಿ ಭತ್ಯೆ ನೀಡಲಾಗುವುದು.

ಅಪ್ರೆಂಟಿಶಿಪ್ ತರಬೇತಿಗೆ ಆಯ್ಕೆ ಬಯಸುವ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿ, ಅಗತ್ಯ ದಾಖಲೆಗಳೊಂದಿಗೆ ದಿನಾಂಕ:18-12-2024ರೊಳಗೆ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರ ಆವರಣ, ಸ್ಟೇಶನ್ ರಸ್ತೆ, ವಿಜಯಪುರ ಕಚೇರಿಗೆ ಸಲ್ಲಿಸಬೇಕು. ನಿಗದಿತ ಅರ್ಜಿ ನಮೂನೆ ಹಾಗೂ ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಚೇರಿಯನ್ನು ಸಂಪರ್ಕಿಸುವಂತೆ ಸಹಾಯಕ ನಿರ್ದೇಶಕ ಅಮರೇಶ ದೊಡಮನಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದು ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

ವಿಜಯಪುರ,ಡಿ.6 : 110/33/11 ಕೆವಿ ಮಮದಾಪುರ1 ಹಾಗೂ 2ರ ಮಾರ್ಗಗಳ ಮೇಲೆ ಬರುವ 110 ಕೆವಿ ವಿದ್ಯುತ್ ಉಪ ಕೇಂದ್ರಗಳಾದ ಬೆಳ್ಳುಬ್ಬಿ, ಶಿರಬುರ, ದೇವರಗೆಣ್ಣೂರ, ರೋಣಿಹಾಳ, ಕಂಬಾಗಿ, ಬಬಲೇಶ್ವರ ಹಾಗೂ 33 ಕೆವಿ ದೇವರ ಗೆಣ್ಣೂರ ವಿದ್ಯುತ್ ಉಪ ಕೇಂದ್ರಗಳಲ್ಲಿ ಮೂರನೇ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ.

ಆದ್ದರಿಂದ, 110 ಕೆವಿ ವಿದ್ಯುತ್ ಉಪ ಕೇಂದ್ರಗಳಾದ ಬೆಳ್ಳುಬ್ಬಿ, ಶಿರಬುರ, ದೇವರಗೆಣ್ಣೂರ, ರೋಣಿಹಾಳ, ಕಂಬಾಗಿ, ಬಬಲೇಶ್ವರ ಹಾಗೂ 33 ಕೆವಿ ದೇವರ ಗೆಣ್ಣೂರ ವಿದ್ಯುತ್ ಉಪ ಕೇಂದ್ರಗಳಿಂದ ಸರಬರಾಜಾಗುವ ನಗರ, ಗ್ರಾಮೀಣ, ನೀರಾವರಿ ಪಂಪಸೆಟ್ 33 ಕೆವಿ ಲಿಂಗದಳ್ಳಿ ಎಲ್‌ಐಸಿ ಮಾರ್ಗ, ಕೋಲಾರ ಕುಡಿಯುವ ನೀರಿನ ಮಾರ್ಗಗಳಲ್ಲಿ ಡಿಸೆಂಬರ್ 07ರ ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸುವಂತೆ ವಿಜಯಪುರ ಹೆಸ್ಕಾಂನ ಅಧಿಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ಕೋರಿದ್ದಾರೆ.

ಅಧಿವೇಶನದಲ್ಲಿ ರೈತರ ಪರವಾಗಿ ಧ್ವನಿ ಎತ್ತುವೆ

ತೊಗರಿ ಬೆಳೆ ಹಾನಿಗೆ ಸರ್ಕಾರದ ಸ್ಪಂದಿಸಲಿ-ಶಾಸಕ ರಾಜುಗೌಡ

ತಾಳಿಕೋಟೆ, ಜಿಲ್ಲೆಯ ಬಹುತೇಕ ಭಾಗಗಳಲ್ಲಿ ಆವರಿಸಿಕೊಂಡ ಮಂಜಿನಿಂದ ತೊಗರಿ ಬೆಳೆಯ ಹೂವು ಉದುರಿ ಹಾನಿಗೀಡಾಗಿವೆ ಕೂಡಲೇ ಸರ್ಕಾರವು ಏಚ್ಚೆತ್ತುಕೊಂಡು ಇನ್ಸೂರೇನ್ಸ್ ಕಂಪನಿ ಮತ್ತು ಕಂದಾಯ ಇಲಾಖೆಯ ನೇತೃತ್ವದಲ್ಲಿ ಜಂಟಿ ಸಮಿಕ್ಷೆ ನಡೆಸಿ ರೈತರ ಸಂಕಷ್ಟಕ್ಕೆ ಸ್ಪಂದಿಸುವಂತಹ ಕೆಲಸ ಸರ್ಕಾರವು ಮಾಡಬೇಕೆಂದು ದೇವರ ಹಿಪ್ಪರಗಿ ಮತಕ್ಷೇತ್ರದ ಶಾಸಕ ರಾಜುಗೌಡ ಪಾಟೀಲ(ಕುದರಿ ಸಾಲವಾಡಗಿ) ಅವರು ಒತ್ತಾಯಿಸಿದರು.

ತೊಗರಿ ಬೆಳೆ ಹಾನಿ ಕುರಿತು ಪತ್ರಿಕೆಯೊಂದಿಗೆ ಮಾತನಾಡಿದ ಅವರು ಸತತ ಬರಗಾಲದಿಂದ ತತ್ತರಿಸುತ್ತಾ ಸಾಗಿಬಂದ ವಿಜಯಪುರ ಜಿಲ್ಲೆಯಲ್ಲಿ ಈ ಭಾರಿ ಉತ್ತಮ ಮಳೆಯಾಗಿತ್ತು ಇದರಿಂದ ರೈತರಲ್ಲಿ ಹುಮ್ಮಸ್ಸಿನ ಜೊತೆಗೆ ಆಶಾಭಾವನೆಯೂ ಕೂಡಾ ಹೆಚ್ಚಾಗಿತ್ತು ಆದರೆ ತೊಗರಿ ಬೆಳೆ ಹೂವು ಹಿಡಿದ ಸಂದರ್ಬದಲ್ಲಿ ಮಂಜು ಮುಸುಕಿನ ವಾತಾವರಣಕ್ಕೆ ಹೂವುಗಳೆಲ್ಲವೂ ನೆಲಕ್ಕೆ ಕಚ್ಚಿ ಬಿದ್ದಿವೆ ಇನ್ನೊಂದೆಡೆ ಕೃಷಿ ಇಲಾಖೆಯಿಂದ ನೀಡಲಾಗಿರುವ ಬೀಜಗಳೂ ಸಹ ಕಳಪೆಮಟ್ಟದಿಂದ ಕೂಡಿದ್ದರಿಂದ ತೊಗರಿ ಗಿಡಗಳು ಹೂವೇ ಹಿಡಿದಿಲ್ಲಾ ಇದರಿಂದ ರೈತರ ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಿದೆ ಮೊದಲೇ ರೈತರು ಸಾಲ ಸೂಲ ಮಾಡಿಕೊಂಡು ಸಂಕಷ್ಟದಲ್ಲಿದ್ದಾರೆ ಇದು ಇನ್ನಷ್ಟು ರೈತರಿಗೆ ಸಂಕಷ್ಟಕ್ಕೆ ನೂಕಿದಂತಾಗಿದೆ ಇಂತಹ ಸಂದರ್ಬದಲ್ಲಿ ಸರ್ಕಾರವು ಏಚ್ಚೆತ್ತುಕೊಂಡು ರೈತರ ಸಂಕಷ್ಟಕ್ಕೆ ಬರಬೇಕಾಗಿದೆ ಮುಖ್ಯಮಂತ್ರಿಗಾದಿಗಾಗಿ ಕಿತ್ತಾಟವನ್ನು ಬಿಟ್ಟು ರೈತರ ಸಮಸ್ಯೆಗಳ ಕಡೆಗೆ ಮುಖ್ಯಮಂತ್ರಿಗಳು ಮತ್ತು ಸಚಿವರು ಗಮನ ಹರಿಸಬೇಕಾಗಿದೆ ಇನ್ಸೂರೇನ್ಸ್ ಕಂಪನಿಯವರು ಮತ್ತು ಕಂದಾಯ ಇಲಾಖೆಯವರು ತೊಗರಿ ಬೆಳೆಯ ಕಟಾವಿಗೂ ಮುಂಚೆಯೇ ಜಂಟಿಯಾಗಿ ಸಮಿಕ್ಷೆ ನಡೆಸಿ ಪ್ರಾಮಾಣಿಕವಾಗಿ ರೈತರಿಗೆ ನ್ಯಾಯ ಒದಗಿಸುವಂತಹ ಕೆಲಸ ಮಾಡಬೇಕೆಂದ ಅವರು ರೈತರಿಗೆ ಬಂದಿರುವ ಈ ಸಂಕಷ್ಟದ ಬಗ್ಗೆ ಇದೇ ದಿ. 9 ರಿಂದ ನಡೆಯಲಿರುವ ವಿಧಾನ ಸಭೆಯ ಚಳಿಗಾಲ ಅಧಿವೇಶನದಲ್ಲಿಯೂ ಕೂಡಾ ನಮ್ಮ ಭಾಗದ ರೈತರ ಪರವಾಗಿ ಧ್ವನಿ ಎತ್ತಿ ಸರ್ಕಾರದ ಗಮನ ಸೇಳೆಯುವದರೊಂದಿಗೆ ರೈತರಿಗೆ ನ್ಯಾಯ ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುವೆ ಯಾವುದೇ ಸಮಯದಲ್ಲಿಯೂ ಕೂಡಾ ರೈತರು ಎದೆಗುಂದುವದು ಅಗತ್ಯವಿಲ್ಲಾ ರೈತನ ಮಗನಾಗಿರುವ ನಾನು ರೈತರ ಪರವಾಗಿ ಸದಾ ನಿಲ್ಲುತ್ತೇನೆಂದರು.

****

ಎಸ್.ಕೆ.ಮಹಾ ವಿದ್ಯಾಲಯದಲ್ಲಿ ವಿಶ್ವ ಮಣ್ಣು ದಿನಾಚರಣೆ

ಉತ್ತಮ ಆರೋಗ್ಯಕ್ಕೆ ಮಣ್ಣಿನ ಸಂರಕ್ಷಣೆ ಅವಶ್ಯ-ಡಾ.ಮುಗಳ್ಳಿಮಠ

ತಾಳಿಕೋಟೆ, ಪಟ್ಟಣದ ವೀ.ವಿ.ಸಂಘದ ಎಸ್.ಕೆ.ಕಲಾ ವಾಣಿಜ್ಯ ಹಾಗೂ ವಿಜ್ಞಾನ ಮಹಾ ವಿದ್ಯಾಲಯದಲ್ಲಿ ಇಕೋ ಕ್ಲಬ್ ಹಾಗೂ ರಸಾಯನಶಾಸ್ತ್ರ, ಸಸ್ಯಶಾಸ್ತ್ರ ಹಾಗೂ ಪ್ರಾಣಿಶಾಸ್ತ್ರ ವಿಭಾಗದ ವತಿಯಿಂದ "ವಿಶ್ವ ಮಣ್ಣು" ದಿನಾಚರಣೆ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಪ್ರಾಚಾರ್ಯರಾದ ಡಾ. ಡಿ.ಬಿ. ಮೂಗಳ್ಳಿಮಠ ಅವರು ಮಾತನಾಡಿ ಅರಣ್ಯ ನಾಶ, ಗಿಡ ಮರ ಕಡಿಯುವುದು, ಭಾರಿ ಮಳೆ ಅಥವಾ ಪ್ರವಾಹದಂತಹ ಸಂದರ್ಭಗಳಲ್ಲಿ ಮಣ್ಣಿನ ಸವೆತ ಹೆಚ್ಚಾಗುತ್ತಿದೆ ಹೀಗಾಗಿ ಭೂಮಿಯ ಭವಿಷ್ಯಕ್ಕಾಗಿ ಮಣ್ಣಿನ ಸಂರಕ್ಷಣೆ ಅವಶ್ಯಕತೆಯನ್ನು ಸಾರ್ವಜನಿಕರಲ್ಲಿ ಜನಜಾಗೃತಿಯ ಮೂಲಕ ಮನವರಿಕೆ ಮಾಡಿಕೊಡಬೇಕಾಗಿದೆ ಭೂಮಿಯ ಮೇಲೆ ಪ್ರತಿಯೊಂದು ಜೀವಿಗಳ ಅಸ್ತಿತ್ವಕ್ಕೆ ಮಣ್ಣಿನ ಮಹತ್ವದ ಬಗ್ಗೆ ನಮ್ಮ ಸುತ್ತಮುತ್ತಲಿನ ಜನರಲ್ಲಿ ಅರಿವು ಮೂಡಿಸಬೇಕು. ನಾವು ಆರೋಗ್ಯಕರ ಜೀವನವನ್ನು ಹೊಂದಲು ನಮಗೆಲ್ಲರಿಗೂ ಆರೋಗ್ಯಕರವಾದ ಮತ್ತು ರಾಸಾಯನಿಕಗಳಿಂದ ಮುಕ್ತವಾದ ಮಣ್ಣು ಅವಶ್ಯಕತೆ ಗಿಡ ಮರಗಳನ್ನು ಬೆಳೆಸುವದರೊಂದಿಗೆ ಅವುಗಳನ್ನು ಮಕ್ಕಳಂತೆ ಪೋಷಿಸುವ ಕಾರ್ಯವಾಗಬೇಕೆಂದರು.

ಇಕೋ ಕ್ಲಬ್ ಸಂಚಾಲಕರಾದ ಕಾಶಿನಾಥ್ ದೇಸಾಯಿ ಮಾತನಾಡಿ ಮಣ್ಣಿನ ಅರಿವನ್ನು ಹೆಚ್ಚಿಸಲು ಮತ್ತು ಮಣ್ಣಿನ ಸತ್ವವನ್ನು ಸುಧಾರಿಸುವ ಮತ್ತು ಸಾವಯುವ ವ್ಯವಸಾಯ ಪದ್ದತಿಯನ್ನು ಉತ್ತೇಜಿಸುವ ಮೂಲಕ ಆರೋಗ್ಯಕರ ಪರಿಸರ ವ್ಯವಸ್ಥೆಯನ್ನು ಕಾಪಾಡಿಕೊಳ್ಳುವುದೇ ಈ ದಿನದ ಆಚರಣೆಯ ಪ್ರಮುಖ ದಯೋದ್ದೇಶವಾಗಿದೆ ಇಂದಿನ ಆದುನಿಕ ಪದ್ಧತಿಯ ಬೇಸಾಯ ಕ್ರಮ, ನೀರಾವರಿ ಸೌಲಭ್ಯ, ಮಿತಿಮೀರಿದ ರಸಗೊಬ್ಬರ ಬಳಕೆ, ಕಳೆ ತೆಗೆಯಲು ಬಳಸುವ ಕೀಟನಾಶಕ ಮತ್ತು ಪ್ಲಾಸ್ಟಿಕ್ ಬಳಕೆಯಿಂದ ಆಗುತ್ತಿರುವ ಮಣ್ಣಿನ ಮಾಲಿನ್ಯವನ್ನು ತಡೆಗಟ್ಟಲು ಪ್ರತಿಯೊಬ್ಬ ರೈತರು, ಸಾರ್ವಜನಿಕರು ಮತ್ತು ಸಮುದಾಯ ಪಣತೊಡಬೇಕಾಗಿದೆ ಎಂದು ಹೇಳಿದರು.

ವೇದಿಕೆ ಮೇಲೆ ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ಎಸ್.ಎಸ್. ಮಾನೆ, ಕುಮಾರಿ ಎಸ್. ಎಸ್. ಜಾಯವಾಡಗಿ, ಕುಮಾರಿ ವೀಣಾ ಬಾಲರೆಡ್ಡಿ, ಕುಮಾರಿ ಸುಧಾ ಬಿರಾದಾರ, ರಮೇಶ ಪವಾರ, ಆನಂದ ಹಿರೇಗೌಡರ, ಬೋಧಕ ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕುಮಾರಿ ಐಶ್ವರ್ಯ ಬಬಲೇಶ್ವರ ಸ್ವಾಗತಿಸಿದರು. ಕು. ಕಲ್ಪನಾ ತಳವಾರ್ ನಿರೂಪಿಸಿದರು. ಕುಮಾರಿ ಕಾವ್ಯಶ್ರೀ ಗೋಡಿಹಾಳ್ ವಂದಿಸಿದರು.

ರಾಮತೀರ್ಥನ ಗರದ ಕರ್ನಾಟಕ ಪಬ್ಲಿಕ್ ಶಾಲೆಯ ಮಕ್ಕಳ ಕ್ಷೇತ್ರಭೇಟಿ

ಬೆಳಗಾವಿ: ನಗರದ ರಾಮತೀರ್ಥ ನಗರದಲ್ಲಿರುವ ಪಿ.ಎಮ್.ಶ್ರೀ ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆಯ ವಾರ್ಷಿಕ ಪ್ರವಾಸ ಕಾರ್ಯಕ್ರಮವನ್ನು ಶಾಲಾ ಆಡಳಿತ ಮಂಡಳಿ ಕೈಗೊಂಡಿದೆ.

500 ಶಾಲಾ ಮಕ್ಕಳು 3 ಹಂತಗಳಲ್ಲಿ 8 ಬಸ್ಸ್ ಗಳ ಮುಖಾಂತರ ದಿನಾಂಕ 6/12/24 ರಿಂದ 30ರ ವರೆಗೆ ರಾಜ್ಯದ ಪ್ರಮುಖ ಪ್ರವಾಸಿ ತಾಣಗಳ ವೀಕ್ಷಣೆಗೆ ತೆರಳಾಗಿದ್ದಾರೆ.

ಬಾಗಲಕೋಟಿಯ ವಿಜ್ಞಾನ ಕೇಂದ್ರ, ತೋಟಗಾರಿಕೆ, ಬಾದಾಮಿ, ಐಹೊಳೆ, ಪಟ್ಟದಕಲ್ಲು, ಶಿವಯೋಗ ಮಂದಿರ ಮಹಾಕೂಟ, ಎರಡನೇಯ ದಿನ ಹಲಸಿ, ಕಿತ್ತೂರು, ನಂದಗಡ, ಶೇಡಗಾಳಿ, ತೋಟಗಾರಿಕೆ ಕ್ಷೇತ್ರ ಸಾಲುಮರದ ತಿಮ್ಮಕ್ಕ ವೃಕ್ಷೋಧ್ಯಾನ ರಾಯಣ್ಣಾ ಪಾರ್ಕ್, ಇನ್ನು ಮೂರನೇಯ ದಿನ ಮುಕ್ತಿಮಠ ಕಿತ್ತೂರು ರಾಣ್ಣಿ ಚೆನ್ನಮ್ಮ ಮೃಗಾಲಯ, ಚಂದನವನ ವೀಕ್ಷಣೆಯ ಬಳಿಕ ಶಾಲೆಗೆ ಶಾಲಾ ಮಕ್ಕಳು ಹಾಗೂ ಶಿಕ್ಷಕರು ಶಾಲಾ ಸಿಬ್ಬಂದಿಗಳು ಮರಳಿದ್ದಾರೆ ಎಂದು ಶಾಲೆಯ ಮುಖ್ಯ ಗುರುಗಳಾದ ಶ್ರೀಮತಿ ಎನ್. ಆರ್. ಮೆಳವಂಕಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಲಿಕೋಪಕರಣಗಳ ತಯಾರಿಕೆ ಸ್ಪರ್ಧೆಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ರಾಜ್ಯ ಮಟ್ಟಕೆ ಆಯ್ಕೆ

ಮುದ್ದೇಬಿಹಾಳ: ವಿಜಯಪುರದಲ್ಲಿ ನಡೆದ ನವೆಂಬರ್ 23 ರಂದು ನಡೆದ ಜಿಲ್ಲಾ ಮಟ್ಟದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಶಿಕ್ಷಕರ ಸಹಪಠ್ಯ ಚಟುವಟಿಕೆಗಳಲ್ಲಿ ತಾಲೂಕಿನ ಆಲೂರ ಪ್ರೌಢ ಶಾಲೆಯ ಗಣಿತ ಶಿಕ್ಷಕಿ ಆರ್ ಎಸ್ ಹುನಗುಂದ ಕಲಿಕೋಪಕರಣ ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ವಿಜೇತರಾಗಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ ಎಂದು ತಿಳಿಸಿದರು.

ವಿಜಯಪುರ ಜಿಲ್ಲೆಯಲ್ಲಿ ನಡೆದ ಕಲಿಕೋಪಕರಣ ಸ್ಪರ್ಧೆಯಲ್ಲಿ ಒಟ್ಟು ಏಳು ಜನ ಶಿಕ್ಷಕರು ಭಾಗವಹಿಸಿದರು ಆದರಲ್ಲಿ ನಮ್ಮ ತಾಲೂಕಿನ ನಮ್ಮ ಶಾಲೆಯ ಶಿಕ್ಷಕಿ ಆಯ್ಕೆಯಾಗಿದ್ದಾಳೆ ಎಂದರೆ ಸಂತೋಷದ ವಿಷಯ ಎಂದರು.

ಎಸ್ ಡಿ ಎಂ ಸಿ ಅಧ್ಯಕ್ಷ ಮುತ್ತಿನಶೆಟ್ಟಿ ಗೂಳಿ, ಹಾಗೂ ಸರ್ವ ಸದಸ್ಯರು,ಕ್ಷೇತ್ರ ಶಿಕ್ಷಣಾಧಿಕಾರಿ ಬಿ ಎಸ್ ಸಾವಳಗಿ,ಕ್ಷೇತ್ರ ಸಮನ್ವಯ ಅಧಿಕಾರಿ ಯು ಬಿ ಧರಿಕಾರ, ಹಾಗೂ ಶಾಲೆಯ ಮುಖ್ಯ ಗುರುಗಳು ಮತ್ತು ಸಿಬ್ಬಂದಿಗಳು ಶುಭಹಾರೈಸಿ ಅಭಿನಂದನೆಗಳು ತಿಳಿಸಿದ್ದಾರೆ..

ಮುಖ್ಯಗುರುಗಳಾದ ವಿದ್ಯಾಧರ ನಮ್ಮ ಪತ್ರಿಕೆ ಜೊತೆ ಮಾತನಾಡಿ. ಇವತ್ತಿನ ದಿನ ಮಾನಗಳಲ್ಲಿ ಮಕ್ಕಳು ತಾಲೂಕು ಮಟ್ಟದಿಂದ ಜಿಲ್ಲಾ ಮಟ್ಟಕ್ಕೆ ರಾಜ್ಯ ಮಟ್ಟಕ್ಕೆ ಆಯ್ಕೆಯಾಗುವುದು ಸಹಜ, ಆದರೆ ಮಕ್ಕಳ ವಯಸ್ಸಿನ ಹಾಗೆ ಈ ಸಾಮರ್ಥ್ಯವನ್ನು ನಾನು ಮಾಡಿ ತೋರಿಸುತ್ತೇನೆ ಎಂದು ಪಣತೊಟ್ಟು ಜಿಲ್ಲಾ ಮಟ್ಟದಿಂದ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.ನಮ್ಮ ಶಾಲೆಯ ತಾಲೂಕಿನ ಹೆಸರು ರಾಜ್